ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 144

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 15-05-2026

# ಕರ್ನಾಟಕದಲ್ಲೂ ಕೇರಳ ಮಾದರಿ ಸೂತ್ರಕ್ಕೆ 'ಕೈ'ಕಮಾಂಡ್ ತಂತ್ರ..?

**ಬೆಂಗಳೂರು, ಮೇ 14–** ಕೇರಳದಲ್ಲಿ ಮುಖ್ಯಮಂತ್ರಿ ಆಯ್ಕೆಯ ವೇಳೆ ಪ್ರಭಾವಕ್ಕೆ ಮಣಿಯದೇ, ನಾಯಕತ್ವದ ಜನಪ್ರಿಯತೆಗೆ ಮಣೆ ಹಾಕುವ ಮೂಲಕ ಕಾಂಗ್ರೆಸ್ ಹೈಕಮಾಂಡ್ ಕರ್ನಾಟಕ ರಾಜ್ಯದ ನಾಯಕತ್ವ ವಿವಾದಕ್ಕೆ ಸ್ಪಷ್ಟ ಸಂದೇಶ ರವಾನಿಸಿದೆ.

ಕೇರಳದಲ್ಲಿ ವಿ.ಡಿ.ಸತೀಶನ್ ವಿರೋಧ ಪಕ್ಷದ ನಾಯಕನಾಗಿ ನಿರ್ಗಮಿತ ಎಲ್‌ಡಿಎಫ್ ಸರ್ಕಾರದ ವಿರುದ್ಧ ಭಾರೀ ಹೋರಾಟ ಮಾಡಿದ್ದರು. ಈ ಮೂಲಕ ಕೇರಳಂನಲ್ಲಿ ಜನಪ್ರಿಯ ನಾಯಕರಾಗಿ ರೂಪುಗೊಂಡಿದ್ದರು.

ಕೆ.ಸಿ.ವೇಣುಗೋಪಾಲ್ ರಾಷ್ಟ್ರ ರಾಜಕಾರಣದಲ್ಲಿ ಮಗ್ನರಾಗಿದ್ದವರು, ಚುವಾವಣೆ ಸಂದರ್ಭದಲ್ಲಿ ಕೇರಳಕ್ಕೆ ಹೆಚ್ಚಿನ ಗಮನ ಕೊಟ್ಟಿದ್ದರು. ತಾವು ಉಸ್ತುವಾರಿ ನಿರ್ವಹಣೆ ಮಾಡಿದ ರಾಜ್ಯಗಳಲ್ಲಿರುವ ಶ್ರೀಮಂತ ನಾಯಕರನ್ನು ಸಂಪರ್ಕಿಸಿ ಅವರ ಮೂಲಕ ಕೇರಳ ವಿಧಾನಸಭಾ ಚುನಾವಣೆಗೆ ಸಂಪನೂಲ ಕ್ರೋಢೀಕರಿಸಿದ್ದರು. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ



ಪ್ರಿಯಾಂಕ ಗಾಂಧಿ ವಾದ್ರಾ ಅವರನ್ನು ಕೇರಳದ ವೈನಾಡಿನಿಂದ ಸಂಸದರಾಗಿ ಗೆಲ್ಲಿಸಿ ಕಳುಹಿಸುವಲ್ಲಿ ವೇಣುಗೋಪಾಲ್ ಅವರ ಪಾತ್ರ ಪ್ರಮುಖವಾಗಿತ್ತು.

ಹೈಕಮಾಂಡ್ ನಾಯಕರ ಜೊತೆಗೆ ಹೆಚ್ಚಿನ ಸಂಪರ್ಕ ಹಾಗೂ ಬಾಂಧವ್ಯ ಹೊಂದಿದ್ದರಿಂದ ಅದನ್ನು ಬಳಕೆ ಮಾಡಿಕೊಂಡು ಕೇರಳದಲ್ಲಿ ಮುಖ್ಯಮಂತ್ರಿಯಾಗುವ ಪ್ರಯತ್ನ ಮಾಡಿದ್ದರು. ಆದರೆ ಯುಡಿಎಫ್ ಕೂಟದ ಮುಸ್ಲಿಂ ಲೀಗ್‌ನ ಮುಖಂಡರು ವೇಣುಗೋಪಾಲ್ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಲು ವಿರೋಧ ವ್ಯಕ್ತ ಪಡಿಸಿದರು.

ಸಂಸದರಾಗಿರುವ ವೇಣುಗೋಪಾಲ್ ಅವರು ವಿಧಾನಸಭೆಯ ಉಪಚುನಾವಣೆಯಲ್ಲಿ ಆಯ್ಕೆಯಾಗಬೇಕು. ಒಂದು ವೇಳೆ ಅಲ್ಲಿ ಸೋಲು ಕಂಡರೆ, ನಾಯಕತ್ವದ ಗೊಂದಲ ಉಂಟಾಗುವುದಲ್ಲದೆ ಸರ್ಕಾರದ ಭವಿಷ್ಯ ಕೂಡ ಅತಂತ್ರ ಸ್ಥಿತಿಗೆ ತಲುಪಲಿದೆ ಎಂಬ ಕಾರಣಕ್ಕಾಗಿ ಮುಸ್ಲಿಂಲೀಗ್ ಪ್ರಬಲ ವಿರೋಧ ವ್ಯಕ್ತಪಡಿಸಿತು. ಅಳೆದು ತೂಗಿ ಕಾಂಗ್ರೆಸ್ ಹೈಕಮಾಂಡ್ ವಿ.ಡಿ.ಸತೀಶನ್‌ಗೆ ಮುಖ್ಯಮಂತ್ರಿ ಸ್ಥಾನ ನೀಡಿದೆ.

ಕರ್ನಾಟಕದಲ್ಲಿ ಸಿದ್ದರಾಮಯ್ಯ ಜನಪ್ರಿಯ ನಾಯಕ ಎಂದು ಗುರುತಿಸಿಕೊಂಡಿದ್ದಾರೆ. 2ನೇ ಅವಧಿಗೆ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಲಾಗಿದೆ. ಕೆ.ಸಿ.ವೇಣುಗೋಪಾಲ್ ಅವರಂತೆ ಡಿ.ಕೆ.ಶಿವಕುಮಾರ್ ಅವರೂ ನಿಷ್ಠಾವಂತ ಕಾಂಗ್ರೆಸ್ಸಿಗರಾಗಿದ್ದು, ಹೈಕಮಾಂಡ್ ಮಟ್ಟದಲ್ಲಿ ಹೆಚ್ಚು ಪ್ರಭಾವ ಹೊಂದಿದ್ದಾರೆ. ನಾಯಕತ್ವ ಬದಲಾಗಬೇಕು 2ನೇಪುಟಕ್ಕೆ

## ತ್ರಿಕೋನ ಏಕದಿನ ಸರಣಿಗೆ ಭಾರತ ಎ ತಂಡ ಪ್ರಕಟ: ವೈಭವ್ ಗೆ ಅವಕಾಶ




**ಮುಂಬೈ, ಮೇ.14–**ಮುಂಬರುವ ಶ್ರೀಲಂಕಾ, ಅಫ್ಘಾನಿಸ್ತಾನ ಹಾಗೂ ಭಾರತ ತಂಡಗಳ ನಡುವೆ ನಡೆಯಲಿರುವ ತ್ರಿಕೋನ ಏಕದಿನ ಕ್ರಿಕೆಟ್ ಸರಣಿಗೆ ಭಾರತ ಎ ತಂಡವನ್ನು ಪ್ರಕಟಿಸಲಾಗಿದೆ. ಚಿನಕುರಳಿ ಕ್ರಿಕೆಟ್ ನಲ್ಲಿ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿ ಭಾರೀ ಸದ್ದು ಮಾಡುತ್ತಿರುವ ವೈಭವ್ ಸೂರ್ಯವಂಶಿಗೆ ಬಿಸಿಸಿಐ ಭಾರತ ತಂಡದಲ್ಲಿ ಅವಕಾಶ ಕಲ್ಪಿಸಿದೆ.

ಈ ಸರಣಿಗೆ ತಿಲಕ್ ವರ್ಮಾ ಅವರನ್ನು ಭಾರತ ಎ ತಂಡದ ನಾಯಕರನ್ನಾಗಿ ಆಯ್ಕೆ ಮಾಡಲಾಗಿದೆ. ರಿಯಾನ್ ಪರಾಗ್ ಉಪನಾಯಕನ ಪಟ್ಟ ನೀಡಲಾಗಿದೆ.

ಐಪಿಎಲ್‌ನಲ್ಲಿ ರನ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸುತ್ತಿರುವ ಪ್ರಿಯಾಂಶ್ ಆರ್ಯ, ಆಯುಷ್ ಬಡೋನಿ ಮತ್ತು ಪ್ರಭ್ಸಿಮ್ರಾನ್ ಸಿಂಗ್ ಅವರಂತಹ ಯುವ ಆಟಗಾರರನ್ನು ಏಕದಿನ ತ್ರಿಕೋನ ಸರಣಿಗೆ ಆಯ್ಕೆ ಮಾಡಲಾ ಗಿದೆ.

ಮತ್ತೊಂದೆಡೆ ಯಶ್ ಠಾಕೂರ್, ಯುಧ್ವೀರ್ ಸಿಂಗ್, ಅನ್ಶುಲ್ ಕಾಂಬೋಜ್ ಮತ್ತು ಅರ್ಷದ್ ಖಾನ್ ರಂತಹ ಉದಯೋನ್ಮುಖ ಬೌಲರ್‌ಗಳಿಗೂ ಈ ಸರಣಿಯಲ್ಲಿ ದೊಡ್ಡ ಅವಕಾಶ ಸಿಗಲಿದೆ.

ಸರಣಿಯ ನಂತರ ಭಾರತ ಎ, ಶ್ರೀಲಂಕಾ ಎ ವಿರುದ್ಧ ಎರಡು ಬಹು–ದಿನದ (ರೆಡ್–ಬಾಲ್) ಪಂದ್ಯಗಳನ್ನು ಸಹ ಆಡಲಿದೆ. ಈ ಟೆಸ್ಟ್ ಪಂದ್ಯಗಳಿಗೆ ತಂಡವನ್ನು ನಂತರ ಪ್ರಕಟಿಸಲು ತೀರ್ಮಾನಿಸಲಾಗಿದೆ.

ತ್ರಿಕೋನ ಸರಣಿಯು ಜೂನ್ 9 ರಂದು ಪ್ರಾರಂಭವಾಗಲಿದ್ದು, ಜೂನ್ 21 ರಂದು ಅಂತಿಮ ಪಂದ್ಯ ನಡೆಯಲಿದೆ. ಎಲ್ಲಾ ತಂಡಗಳು ಪರಸ್ಪರ ಎರಡು ಬಾರಿ ಮುಖಾಮುಖಿಯಾಗಲಿದ್ದು, ಅಗ್ರ ಎರಡು ತಂಡಗಳು ಫೈನಲ್‌ನಲ್ಲಿ ಮುಖಾಮುಖಿಯಾಗಲಿವೆ.

ತಂಡ ಇಂತಿದೆ: ತಿಲಕ್ ವರ್ಮಾ (ನಾಯಕ),ರಿಯಾನ್ ಪರಾಗ್ (ಉಪನಾಯಕ)ಪ್ರಿಯಾಂಶ್ ಆರ್ಯ, ವೈಭವ್ ಸೂರ್ಯವಂಶಿ,ಆಯುಷ್ ಬದೋನಿ,ನಿಶಾಂತ್ ಸಿಂಧು,ಹರ್ಷ ದುಬೆ, ಸೂರ್ಯಾಂಶ್ ಶೆಡ್ಗೆ, ಪ್ರಭಾಸಿಮ್ರಾನ್ ಸಿಂಗ್ (ವಿಕೆಟ್ ಕೀಪರ್) ಕುಮಾರ್ ಕುಶಾಗ್ರಾ (ವಿಕೆಟ್ ಕೀಪರ್) ವಿಪ್ರಜ್ ನಿಗಮ್, ಯಶ್ ಠಾಕೂರ್
ಯುದ್ಧವೀರ್ ಸಿಂಗ್, ಅಂಶುಲ್ ಕಾಂಬೋಜ್, ಅರ್ಷದ್ ಖಾನ್

# ವಕ್ಫ್ ಆಸ್ತಿ ಕಬಳಿಕೆ, ಅಕ್ರಮ ವಾಣಿಜ್ಯ ಮಳಿಗೆ ನಿರ್ಮಾಣ ಆರೋಪ : ತನಿಖೆಗೆ ಆಗ್ರಹ

ಧೈರ್ಯದ ದಾರಿ

**ಮಾನ್ವಿ :** ಪಟ್ಟಣದ ವಕ್ಫ್ ಆಸ್ತಿ, ಖಬರಸ್ಥಾನ ಜಾಗ ಹಾಗೂ ಈದ್ಗಾ ಕಮಿಟಿ ವಿರುದ್ಧ ಗಂಭೀರ ಆರೋಪಗಳು ಕೇಳಿಬಂದಿದ್ದು, ಸಂಪೂರ್ಣ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ದಲಿತ ಸೇನೆ ವತಿಯಿಂದ ಜಿಲ್ಲಾ ವಕ್ಫ್ ಅಧಿಕಾರಿಗಳಿಗೆ ದೂರು ಸಲ್ಲಿಸಲಾಗಿದೆ.

ಮಾನ್ವಿ ಪಟ್ಟಣದ ಸರ್ವೇ ನಂ.279/P1 ರ ಒಟ್ಟು 15.39 ಎಕರೆ ಜಾಗದಲ್ಲಿ 11.07 ಎಕರೆ ಗಾಯರಾಣ (ನಮಾಜಗೇರಿ) ಹಾಗೂ 4.32 ಎಕರೆ ವಕ್ಫ್ ಬೋರ್ಡ್ ಈದ್ಗಾ ಆಸ್ತಿ ದಾಖಲಾಗಿದ್ದು, ಇದೇ ಸ್ಥಳದಲ್ಲಿ ಈದ್ಗಾ ಶಾದಿ ಮಹಲ್ ನಿರ್ಮಾಣಗೊಂಡಿದೆ. ಆದರೆ ಈದ್ಗಾ ಕಮಿಟಿಯ ಅಧ್ಯಕ್ಷರಾಗಿರುವ ಗಫೂರ್ ಸಾಬ್ ಅವರು ವಕ್ಫ್ ಆಸ್ತಿಯನ್ನು ಅಕ್ರಮವಾಗಿ ಕಬಳಿಸಿ, ನಕಲಿ ದಾಖಲೆಗಳನ್ನು ಸೃಷ್ಟಿಸಿ ಸುಖೊ ಬ್ಯಾಂಕ್ ಸೇರಿದಂತೆ ಹಲವು ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿ ಮಾರಾಟ ಹಾಗೂ ಬಾಡಿಗೆ ಪಡೆಯುತ್ತಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಇದೇ ವೇಳೆ ಸಾರ್ವಜನಿಕ ದಾರಿಯ ಮೇಲೆಯೇ ಭಾವಣಿ ನಿರ್ಮಿಸಿಕೊಂಡು ವಾಸವಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿದೆ ಎಂದು ತಿಳಿಸಲಾಗಿದೆ.




ಬಡ ಮುಸ್ಲಿಂ ಸಮುದಾಯದ ಅನುಕೂಲಕ್ಕಾಗಿ ನಿರ್ಮಿಸಲಾದ ಹೈಟೆಕ್ ಈದ್ಗಾ ಶಾದಿ ಮಹಲ್‌ನ್ನು 17-02-2004 ರಂದು ಉದ್ಘಾಟಿಸಲಾಗಿದ್ದು, ಮದುವೆ ಹಾಗೂ ಇತರೆ ಕಾರ್ಯಕ್ರಮಗಳಿಗೆ 25 ಸಾವಿರದಿಂದ 30 ಸಾವಿರವರೆಗೆ ಹಣ ಪಡೆಯಲಾಗುತ್ತಿದೆ. ಆದರೆ ಇದುವರೆಗೆ ಯಾವುದೇ ಆಡಿಟ್ ವರದಿ ಅಥವಾ ಆದಾಯ–ಖರ್ಚಿನ ಲೆಕ್ಕಪತ್ರಗಳನ್ನು ಸಾರ್ವಜನಿಕವಾಗಿ ಪ್ರಕಟಿಸಿಲ್ಲ ಎಂಬ ಆರೋಪವೂ ಕೇಳಿಬಂದಿದೆ. ಅಲ್ಲದೆ ಇಸ್ಲಾಂ ನಗರದ ಮಸ್ಜಿದ್ ಹುದಾ ಹತ್ತಿರದ ಸರ್ಕಾರಿ ಖಬರಸ್ಥಾನ ಜಾಗದಲ್ಲಿಯೂ ಅಕ್ರಮವಾಗಿ ವಾಣಿಜ್ಯ ಮಳಿಗೆಗಳು ನಿರ್ಮಾಣಗೊಂಡಿದ್ದು, ವಕ್ಫ್ ಇಲಾಖೆಯ ಅನುಮತಿ ಇಲ್ಲದೇ ಲಕ್ಷಾಂತರ ರೂಪಾಯಿ ಮುಂಗಡ ಹಣ ಪಡೆದು ಬಾಡಿಗೆಗೆ ನೀಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಪುರಸಭೆ ಹಾಗೂ ನಗರಾಭಿವೃದ್ಧಿ ಇಲಾಖೆಯ ಪರವಾನಿಗೆ ಪಡೆಯದೇ ಎಡೆಡ್ ಶಾಲೆ ನಿರ್ಮಿಸಿ ವರ್ಷಕ್ಕೆ ಲಕ್ಷಾಂತರ ರೂಪಾಯಿ ಬಾಡಿಗೆ ಪಡೆಯಲಾಗುತ್ತಿದೆ ಎಂದು ಆರೋಪಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಕ್ಫ್ ಹಾಗೂ ಖಬರಸ್ಥಾನ ಜಾಗದ ಸಂಪೂರ್ಣ ದಾಖಲೆ ಪರಿಶೀಲನೆ ನಡೆಸಬೇಕು, ಅಕ್ರಮ ಕಬಳಿಕೆ ಮತ್ತು ದಾಖಲೆ ಸೃಷ್ಟಿ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು, ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು, ಕಬಳಿಸಲಾದ ವಕ್ಫ್ ಆಸ್ತಿಯನ್ನು ಮರು ವಕ್ಫ್ ಇಲಾಖೆಗೆ ಹಿಂಪಡೆಯಬೇಕು, ಶಾದಿ ಮಹಲ್ ಹಾಗೂ ಇತರೆ ಆಸ್ತಿಗಳ ಸಂಪೂರ್ಣ ಆಡಿಟ್ ನಡೆಸಬೇಕು ಹಾಗೂ ಪ್ರಸ್ತುತ ಈದ್ಗಾ ಕಮಿಟಿಯನ್ನು ರದ್ದುಪಡಿಸಿ ಹೊಸ ಆಡಳಿತ ಮಂಡಳಿಯನ್ನು ಪಾರದರ್ಶಕವಾಗಿ ರಚಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ತನಿಖೆ ನಡೆಸದಿದ್ದಲ್ಲಿ ಮುಂದಿನ ದಿನಗಳಲ್ಲಿ ದಲಿತ ಸೇನೆ ವತಿಯಿಂದ ಉಗ್ರ ಹೋರಾಟ ನಡೆಸಿ ವಕ್ಫ್ ಇಲಾಖೆಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

# ಮಾವಿನ ಕೆರೆಗೆ ಜಿಲ್ಲಾಧಿಕಾರಿ ಎಸ್.ಪೂವಿತಾ ಭೇಟಿ: ಪರಿಶೀಲನೆ



ಧೈರ್ಯದ ದಾರಿ

**ರಾಯಚೂರು ಮೇ.14:** ರಾಯಚೂರು ನಗರದ ಐತಿಹಾಸಿಕ ಮಾವಿನಕೆರೆ ಪ್ರದೇಶಕ್ಕೆ ಜಿಲ್ಲಾಧಿಕಾರಿಗಳಾದ ಎಸ್.ಪೂವಿ ಅವರು ಮೇ.13ರ ಬುಧುವಾರ ದಂದು ಭೇಟಿ ನೀಡಿ ಪರಿಶೀಲಿಸಿದರು. ಕೆರೆ ಅಭಿವೃದ್ಧಿ ಕಾಮಗಾರಿಯ ವೀಕ್ಷಣೆ ನಡೆಸಿ, ಜಿಲ್ಲಾಧಿಕಾರಿ ಎಸ್.ಪೂವಿತಾ ಅವರು ಮಾತನಾಡಿ, ಕೆರೆ ಅಭಿವೃದ್ಧಿ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು. ಕಾಮಗಾರಿಗೆ ಯಾವುದೇ ಅಡೆತಡೆ ಬಂದರೆ ಕೂಡಲೇ ಜಿಲ್ಲಾಡಳಿತವನ್ನು ಸಂಪರ್ಕ ಮಾಡಬೇಕು. ಹಾಗೂ ಕಾಮಗಾರಿಯನ್ನು ಗುಣಮಟ್ಟದಿಂದ ಮಾಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನಂತರ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಂದ ಕೆರೆಯ ವಿಸ್ತರಣೆ ಮಾಹಿತಿಯನ್ನು ಪಡೆದರು. ಮಾವಿನಕೆರೆಗೆ ಬೇರೆ ಬೇರೆ ಕಡೆಗಳಿಂದ ಗಟಾರು ನೀರು ಕೆರೆಗೆ ಹರಿದು ಬರದಂತೆ ನೋಡಿಕೊಳ್ಳಬೇಕು. ಸಾರ್ವಜನಿಕರು ಕೆರೆಗೆ ಕಸ ಮತ್ತು ಪ್ಲಾಸ್ಟಿಕ್ ಎಸೆಯದಂತೆ ಜನರಲ್ಲಿ ಜಾಗೃತಿ ಮೂಡಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಕೆರೆ ಅಭಿವೃದ್ಧಿ ಮತ್ತು ಸಂರಕ್ಷಣಾಧಿಕಾರಿ ಆನಂದ ರೆಡ್ಡಿ, ಕೆರೆ ಇಂಜಿನಿಯರ್ ಬಸವರಾಜ ಸೇರಿದಂತೆ ಗುತ್ತೇದಾರರು, ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ನಾಲ್ಕು ಸಂಹಿತೆಗಳನ್ನು ಕೂಡಲೇ ಕೇಂದ್ರಸರಕಾರವು ರದ್ದು ಪಡಿಸುವಂತೆ ಒತ್ತಾಯಿಸಿ ಎ.ಐ.ಸಿ.ಸಿ.ಟಿ.ಯು. ನೇತೃತ್ವದಲ್ಲಿ ಪ್ರತಿಭಟನೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಸವವೃತ್ತದಲ್ಲಿ ಆಲ್ ಇಂಡಿಯಾ ಸೆಂಟ್ರಲ್ ಕೌನ್ಸಿಲ್ ಆಫ್ ಟ್ರೇಡ್ ಯೂನಿಯನ್(ಎ.ಐ.ಸಿ.ಸಿ.ಟಿ.ಯು) ನೇತೃತ್ವದ ಕಾರ್ಮಿಕ ಸಂಘಟನೆಗಳ ವತಿಯಿಂದ ಕೇಂದ್ರ ಸರಕಾರ ಜಾರಿಗೊಳಿಸಲು ಮುಂದಾಗಿರುವ ಕಾರ್ಮಿಕ ವಿರೋಧಿ ನಾಲ್ಕು ಕಾರ್ಮಿಕ ಸಂಹಿತೆಗಳ ಅಧಿಸೂಚನೆಯ ಪ್ರತಿಗಳನ್ನು ಸುಡುವ ಮೂಲಕ ಪ್ರತಿಭಟನೆ ನಡೆಸಿ ಎಐಸಿಸಿಟಿಯು ತಾ.ಸಂಚಲಕರಾದ ರಾಜ ಸಾಬ್ ಮಾತನಾಡಿ ಕೇಂದ್ರ ಸರಕಾರ ಕಾರ್ಮಿಕ ವಿರೋಧಿಯಾಗಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ದೇಶದಲ್ಲಿ ಜಾರಿಗೆ ತರಲು ಮುಂದಾಗಿದ್ದು ಈ ಸಂಹಿತೆಗಳು ಬಂಡವಾಳಶಾಹಿಗಳು ಮತ್ತು ಕಾರ್ಪೊರೇಟ್ ಕಂಪನಿಗಳ ಹಿತಾಸಕ್ತಿಗೆ ಅನುಗುಣವಾಗಿವೆ ಹಾಗೂ ಸಂಪೂರ್ಣವಾಗಿ ಕಾರ್ಮಿಕರ ವಿರೋಧಿಯಾಗಿದು. ಈ ನಾಲ್ಕು ಸಂಹಿತೆಗಳನ್ನು ಕೂಡಲೇ ಕೇಂದ್ರಸರಕಾರವು ರದ್ದು ಪಡಿಸಿ ಕಾರ್ಮಿಕರ ಹಿತ ಕಾಪಾಡಬೇಕು ಎಂದು ಒತ್ತಾಯಿಸಿದರು.ಎಐಸಿಸಿಟಿಯು ವತಿಯಿಂದ ಜಿಲ್ಲಾವ್ಯಾಪಿ ಪ್ರತಿಭಟನೆಗೆ ಕರೆ ನೀಡಿರುವ ಅಂಗವಾಗಿ ಪಟ್ಟಣದಲ್ಲಿ ಕೂಡ ತಾಲೂಕಿನ ಕಾರ್ಮಿಕ ಸಂಘಟನೆಗಳ ವತಿಯಿಂದ ನಡೆದ ಪ್ರತಿಭಟನಯಲ್ಲಿ ನೂರಾರು ಕಾರ್ಮಿಕರು ಭಾಗವಹಿಸಿದರು. ತಾಲೂಕಿನ ಎ.ಐ.ಸಿ.ಸಿ.ಟಿ.ಯು. ಮುಖಂಡರಾದ ಈಶಪ್ಪ ಗೌಡ, ವೆಂಕಟೇಶ್ ಕೋರಿ, ಚಂದು ಸಾಬ್, ಗೋಪಾಲ್ ರಾವ್, ಜಲೀಲ್ ಪಾಶಾ, ಇಮ್ರಾನ್ ಸೇರಿದಂತೆ ನೂರಾರು ಕಾರ್ಮಿಕರು ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

ಮೊದಲನೇ ಪುಟದಿಂದ

# ಕರ್ನಾಟಕದಲ್ಲೂ ಕೇರಳ ಮಾದರಿ ಸೂತ್ರಕ್ಕೆ 'ಕೈ'ಕಮಾಂಡ್ ತಂತ್ರ..?

ಮತ್ತು 2023ರಲ್ಲಿ ಆಶ್ವಾಸನೆ ನೀಡಿದಂತೆ ತಮಗೆ ಈಗ ಮುಖ್ಯಮಂತ್ರಿ ಸ್ಥಾನ ಬಿಟ್ಟುಕೊಡಬೇಕು ಎಂದು ಪಟ್ಟು ಹಿಡಿದಿದ್ದಾರೆ.

ಇದು ರಾಜ್ಯದಲ್ಲಿ ನಾಯಕತ್ವದ ಬದಲಾವಣೆ ಸಂಬಂಧಪಟ್ಟಂತೆ ತೀವ್ರ ವಿವಾದವನ್ನು ಸೃಷ್ಟಿಸಿದೆ. ವಿರೋಧ ಪಕ್ಷಗಳಿಗಷ್ಟೆ ಅಲ್ಲದೇ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ವಾಗ್ದಾಳಿಗೂ ಕಾರಣವಾಗಿದೆ. ಆದರೆ ಕರ್ನಾಟಕದ ವಿಚಾರದಲ್ಲಿ ಕಾಂಗ್ರೆಸ್ ಹೈಕಮಾಂಡ್ ಈವರೆಗೂ ಯಾವುದೇ ನಿರ್ಣಯ ತೆಗೆದುಕೊಳ್ಳದೆ ಅಡ್ಡಗೋಡೆಯ ಮೇಲೆ ದೀಪವಿಟ್ಟಂತೆ ವರ್ತಿಸುತ್ತಿದೆ.

ಪಂಚರಾಜ್ಯಗಳ ಚುನಾವಣೆ ಬಳಿಕ ರಾಜಕೀಯ ತೀರ್ಮಾನಗಳನ್ನು ಪೂರ್ಣಗೊಳಿಸಿ, ಕರ್ನಾಟಕ ವಿಚಾರವನ್ನು ಚರ್ಚೆಗೆ ಎತ್ತಿಕೊಳ್ಳುವುದಾಗಿ ವರಿಷ್ಠರು ಹೇಳುತ್ತಾ ಬಂದಿದ್ದರು. ಈಗ ಕೇರಳ ಮುಖ್ಯಮಂತ್ರಿ ಆಯ್ಕೆ ಪೂರ್ಣಗೊಂಡಿರುವುದರಿಂದ ಕರ್ನಾಟಕದತ್ತ ಹೈಕಮಾಂಡ್ ಗಮನ ಹರಿಸಬಹುದು ಎಂಬ ನಿರೀಕ್ಷೆಗಳಿವೆ. ಮೇ 15ರಂದು ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ದೆಹಲಿಗೆ ಭೇಟಿ ನೀಡಲಿದ್ದಾರೆ, ನಾಯಕತ್ವದ ವಿವಾದ ಇತ್ಯರ್ಥಗೊಳ್ಳಲಿದೆ ಎಂದು ಹೇಳಲಾಗಿತ್ತು. ಆದರೆ ಸಿದ್ದರಾಮಯ್ಯ ಇದನ್ನು ತಳ್ಳಿಹಾಕಿದ್ದಾರೆ.

ಕೇರಳದ ಮಾದರಿಯಲ್ಲೆ ಕರ್ನಾಟಕದಲ್ಲಿ ಸ್ಥಳೀಯ ನಾಯಕತ್ವದ ಜನಪ್ರಿಯತೆಗೆ ಮಣೆ ಹಾಕಿದ್ದರೆ ಸಿದ್ದರಾಮಯ್ಯ ಅವರ ಕುರ್ಚಿ ಬಾಕಿಯಿರುವ ಎರಡು ವರ್ಷಗಳ ಕಾಲ ಗಟ್ಟಿಯಾಗಿರುವ ಸಾಧ್ಯತೆಗಳಿವೆ. ಮೇಲ್ನೋಟದ ಪರಿಸ್ಥಿತಿಯ ಪ್ರಕಾರ ಸದ್ಯಕ್ಕೆ ನಾಯಕತ್ವ ಬದಲಾವಣೆಗೆ ಸಂಬಂಧ ಪಟ್ಟಂತಹ ಮಹತ್ವದ ಬದಲಾವಣೆಗಳು ಕಂಡು ಬರುತ್ತಿಲ್ಲ.

ಡಿ.ಕೆ.ಶಿವಕುಮಾರ್ ಅವರು ನಿರಾಶೆಯಿಂದಲೇ ತಿರುಗಾಡುತ್ತಿದ್ದು, ಮೇ 15ರ ಹುಟ್ಟುಹಬ್ಬಕ್ಕೆ ಉನ್ನತ ಹುದ್ದೆಯ ಕೊಡುಗೆ ಸಿಗುವುದು ಅನುಮಾನಾಸ್ಪದವಾಗಿದೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡವಳಿಕೆ ಮತ್ತಷ್ಟು ಗೊಂದಲ ಮೂಡಿಸಿದೆ.

# ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟುಗಳಿಗೆ ಹೊಸ ಚೈನ್ ಅಳವಡಿಕೆ

**ಹೊಸಪೇಟೆ.ಮೇ,14–** ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳಿಗೆ ಹೊಸ ಚೈನ್ ಅಳವಡಿಕೆ ಕಾರ್ಯ ಇಂದಿನಿಂದ ಆರಂಭವಾಗಲಿದೆ.

ತುಂಗಭದ್ರಾ ಜಲಾಶಯಕ್ಕೆ ಈಗಾಗಲೇ 33 ಹೊಸ ಕ್ರಸ್ಟ್ ಗೇಟುಗಳ ಅಳವಡಿಕೆ ಕಾರ್ಯ ಯಶಸ್ವಿಯಾಗಿ ಪೂರ್ಣಗೊಂಡಿದ್ದು. ಚೈನ್ ಅಳವಡಿಕೆ ಕಾರ್ಯ ಮಾತ್ರ ಬಾಕಿ ಇತ್ತು. ಹೊಸ ಚೈನ್ ಈಗಾಗಲೇ ಚೆನ್ನೈಯಿಂದ ಬುಧವಾರ ತುಂಗಭದ್ರಾ ಜಲಾಶಯದ ಆವರಣ ತಲುಪಿದ್ದು. ಇಂದಿನಿಂದ ಕ್ರಸ್ಟ್ ಗೇಟುಗಳಿಗೆ ಪ್ರಾಯೋಗಿಕವಾಗಿ ಹೊಸ ಚೈನ್ ಅಳವಡಿಕೆ ಕಾರ್ಯ ಆರಂಭಿಸುವುದಾಗಿ ತುಂಗಭದ್ರಾ ಮಂಡಳಿ ಅಧಿಕಾರಿಗಳು ತಿಳಿಸಿದ್ದಾರೆ.

ಮೇ ಅಂತ್ಯದೊಳಗೆ ಪೂರ್ಣ: ತುಂಗಭದ್ರಾ ಜಲಾಶಯದ 33 ಕ್ರಸ್ಟ್ ಗೇಟುಗಳಿಗೆ ಚೈನ್ ಅಳವಡಿಸುವ ಕಾರ್ಯವನ್ನು ಮೇ ಅಂತ್ಯದೊಳಗೆ ಪೂರ್ಣಗೊಳಿಸಲು ತುಂಗಭದ್ರಾ ಮಂಡಳಿ ತೀಮಾನಿಸಿದೆ. ಗೇಟ್ ಸಂಖ್ಯೆ 33 ರಿಂದ ಚೈನ್ ಅಳವಡಿಕೆ ಕಾರ್ಯ ಆರಂಭಗೊಳ್ಳಲಿದೆ. ಒಂದು ಗೇಟ್ ಗೆ ಚೈನ್ ಅಳವಡಿಸಲು 2 ರಿಂದ 3 ದಿನ ಬೇಕಾಗುತ್ತದೆ ಎನ್ನಲಾಗಿದೆ. ಚೈನ್ ಅಳವಡಿಕೆಗೆ ಈಗಾಗಲೇ ವಿಶೇಷ ತಜ್ಞರ ತಂಡ ರಚಿಸಲಾಗಿದೆ.

ಆತಂಕ ದೂರ: ಕಳೆದ ವರ್ಷ ಜಲಾಶಯದ 19ನೇ ನಂಬರಿನ ಗೇಟಿನ ಚೈನ್ ಲಿಂಕ್ ಕಟ್ ಆಗಿ ಕ್ರಸ್ಟ್ ಗೇಟು ನೀರಿನ ರಭಸಕ್ಕೆ ಕಿತ್ತುಕೊಂಡು ಹೋಗಿತ್ತು. ಇದರಿಂದ ಅಪಾರ ಪ್ರಮಾಣದ ನೀರು ಹೊರ ಹೋಗಿ ರೈತರಲ್ಲಿ ಆತಂಕ ಮನೆ ಮಾಡಿತ್ತು. ತುರ್ತಾಗಿ ಸ್ಟಾಪ್ ಲಾಕ್ ಅಳವಡಿಸಿ, ನೀರು ಜಲಾಶಯದಿಂದ ಹೊರ ಹೋಗದಂತೆ ತಡೆದು ರೈತರ ಬೆಳೆಗಳಿಗೆ ನೀರು ನೀಡಲಾಗಿತ್ತು. ನಂತರ ತಜ್ಞರ ಸಲಹೆಯಂತೆ ತುಂಗಭದ್ರಾ ಮಂಡಳಿ ಜಲಾಶಯದ ಎಲ್ಲಾ ಕ್ರಸ್ಟ್ ಗೇಟುಗಳ ಬದಲಾವಣೆಗೆ ಮುಂದಾಗಿ, 33 ಹೊಸ ಕ್ರಸ್ಟ್ ಗೇಟುಗಳನ್ನು ಯಶಸ್ವಿಯಾಗಿ ಆಳವಡಿಸುವ ಮೂಲಕ ರೈತರ ಆತಂಕ ದೂರ ಮಾಡಿತ್ತು.



ಸಣ್ಣ ಪುಟ್ಟ ವೆಲ್ಡಿಂಗ್ ಕೆಲಸಗಳಿದ್ದು. ಅವುಗಳನ್ನು ಮೇ.15 ರೊಳಗೆ ಪೂರ್ಣಗೊಳಿಸುವ ಭರವಸೆ ನೀಡಿ ಅದರಂತೆ ಕೆಲಸ ಆರಂಭಿಸಿತ್ತು. ಆದರೆ ಹೊಸ ಚೈನ್ ಅಳವಡಿಕೆ ಮಾತ್ರ ಬಾಕಿ ಇತ್ತು. ಅದರಂತೆ ಮೊದಲ ಹಂತವಾಗಿ 5 ಹೊಸ ಚೈನ್ ಗಳು ಜಲಾಶಯದ ಆವರಣ ತಲುಪಿದ್ದು. ಇಂದಿನಿಂದ ಪ್ರಾಯೋಗಿಕ ಅಳವಡಿಕೆ ಕಾರ್ಯ ಆರಂಭಗೊಳ್ಳಲಿದೆ.

5.8 ಕೋಟಿ ವೆಚ್ಚ: ಒಟ್ಟು 5,8 ಕೋಟಿ ರೂ ವೆಚ್ಚದಲ್ಲಿ 33 ಗೇಟುಗಳಿಗೆ ಹೊಸ ಚೈನ್ ಅಳವಡಿಸಲಾಗುತ್ತಿದೆ. ಅದಕ್ಕಾಗಿ 66 ಚೈನ್ ಗಳನ್ನು ಚೆನ್ನೈನಲ್ಲಿ ತಯಾರಿಸಲಾಗಿದೆ. ಪ್ರತಿ ಒಂದು ಚೈನ್ 1.9 ಟನ್ ತೂಕ ಹೊಂದಿದ್ದು. ಒಟ್ಟು 33 ಗೇಟುಗಳಿಗೆ ತಲಾ ಎರಡರಂತೆ 66 ಚೈನ್ ಗಳನ್ನು ಅಳವಡಿಸಲಾಗುತ್ತಿದೆ.

ತುಂಗಭದ್ರಾ ಜಲಾಶಯದ ಹೊಸ ಕ್ರಸ್ಟ್ ಗೇಟುಗಳ ಅಳವಡಿಕೆ ಕಾರ್ಯ ಯಶಸ್ವಿಯಾಗಿ ಪೂರ್ಣಗೊಂದಿದೆ. ಈಗಾಗಲೇ 5 ಹೊಸ ಚೈನುಗಳು ಜಲಾಶಯದ ಆವರಣ ತಲುಪಿದ್ದು. ಇಂದಿನಿಂದ ಹೊಸ ಚೈನ್ ಗಳ ಪ್ರಾಯೋಗಿಕ ಅಳವಡಿಕೆ ಕಾರ್ಯ ಆರಂಭಿಸಿ, ಮೇ ಅಂತ್ಯದೊಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಒ.ಆರ್.ಕೆ. ರೆಡ್ಡಿ
ಕಾರ್ಯದರ್ಶಿ, ತುಂಗಾಭದ್ರಾ ಮಂಡಳಿ.

# ಡಾ. ಅಂಬೇಡ್ಕರ್ ಅರಿವು ಉತ್ಸವ ಕಾರ್ಯಕ್ರಮದ ಪೂರ್ವ ಸಿದ್ಧತೆ ಪರಿಶೀಲಿಸಿದ ಶಾಸಕ ಡಾ. ಅಜಯ್ ಸಿಂಗ್



**ಜೇವರ್ಗಿ,ಮೇ.14–** ಪಟ್ಟಣದಲ್ಲಿ ಇದೇ ಮೇ 15, 16 ಮತ್ತು 17 ರಂದು ಜರುಗಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಹಾಗೂ ಡಾ ಅಂಬೇಡ್ಕರ್ ಅರಿವು ಉತ್ಸವ 2026 ಕಾರ್ಯಕ್ರಮದ ಪೂರ್ವ ಸಿದ್ಧತೆಗಳನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಡಾ. ಅಜಯ್ ಸಿಂಗ ಅವರು, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.
ಡಾ.ಬಾಬಾ ಸಾಹೇಬರ ಜಯಂತ್ಯೋತ್ಸವವನ್ನು ಅತ್ಯಂತ ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಆಚರಿಸಲು ಸಮಿತಿಯ ಪದಾಧಿಕಾರಿಗಳೊಂದಿಗೆ ಅವರು, ಚರ್ಚಿಸಿದರು. ಕಾರ್ಯಕ್ರಮದ ತಯಾರಿಗಳ ಬಗ್ಗೆ ಪರಿಶೀಲನೆ ನಡೆಸಲಾಯಿತು.

ಕಾಂಗ್ರೆಸ್ ಮುಖಂಡರಾದ ವಿಜಯಕುಮಾರ್ ಹಿರೇಮಠ ಕಾಶಿರಾಯ ಗೌಡ ಯಲಗೋಡ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಚಂದ್ರಶೇಖರ್ ಹರನಾಳ ಶಾಂತಪ್ಪ ಕೂಡಲಗಿ . ಹಿರಿಯ ಮುಖಂಡರದ ಸುಭಾಷ ಚನ್ನೂರು ಹಾಗೂ ಜಯಂತ್ಯೋತ್ಸವ ಸಮಿತಿಯ ಅಧ್ಯಕ್ಷರಾದ ಪುಂಡಲಿಕ ಗಾಯಕವಾಡ ಗೌರವಾಧ್ಯಕ್ಷ ಶಾಂತಪ್ಪ ಯಲಗೋಡ ಉಪಧ್ಯಕ್ಷರಾದ ಸಂತೋಷ್ ಚೆನ್ನೂರ್ ಮಹದೇವ್ ಕೊಳಕುರ ಶ್ರೀಮಂತ ಧನ್ನಕರ ರವಿ ಕುಳಗೇರಿಸಿದ್ದು ಕೆರೂರ್ ವಿಶ್ವರಾಧ್ಯ ಮಾಯೇರ ಸುರೇಶ್ ಡುಗನಕರ ಜಗದೇವಿ ಜಟ್ನಕರ ಮಲ್ಲಣ್ಣ ಕೊಡಚಿ ಗುರಣ್ಣ ಕಾಚಾಪುರ್ ಶ್ರೀಹರಿ ಕರ್ಕಳಿ ದವಲಪ್ಪ ಮದನ ಮಾಪನ ಕಟ್ಟಿ ಮಲ್ಲಿಕಾರ್ಜುನ್ ಕೆಲ್ಲೂರ್ ರಾಯಪ್ಪ ಬಾರಿಗಿಡ ಹರಿಚಂದ್ರ ಕೊಡಚಿ ರಾಜಶೇಖರ್ ಶಿಲ್ಪಿ ಮಲ್ಲಮ್ಮ ಕೊಬ್ಬಿನ ಯಶವಂತ್ ಮಂದೇವಾಲ ಶರಣುಬಸವ ರೇವನೂರ ಮಹೇಶ ಕೋಕಿಲೆ ಶರಣಬಸವ ಲಕಣಾಪುರ್ ದೇವೇಂದ್ರ ಮುದುವಾಳ ಸಿದ್ದು ಜನಿವಾರ ಭೀಮಶಂಕರ್ ಹರನಾಳ ಬಲರಾಮ್ ಹರನೂರ ಭೀಮರಾಯ ಬಳಬಟ್ಟಿ ಸುಭಾಷ್ ಕೊಬ್ಬಿನ ಶರಣು ಚನ್ನೂರ್ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮಾಜದ ಹಿರಿಯ ಮುಖಂಡರು ಈ ಸಂದರ್ಭದಲ್ಲಿ ಇದ್ದರು.

# ಮೇ.20ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು ಮೇ.14 :** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.20ರ ಬೆಳಿಗ್ಗೆ 08 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಕಲ್ಮಲಾ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.
ಅಂದು ಬೆಳಿಗ್ಗೆ 8ರಿಂದ ಕಲ್ಮಲಾ, ಮುರಾಂಪುರ, ಸುಲ್ತಾನಪುರ, ಜಾಗೀರವೆಂಕಟಪುರ, ಮಂಚ್ಲಾಪುರ, ಜೇಗರಕಲ್, ರಘುನಾಥನಹಳ್ಳಿ, ವಿಜಯನಗರ ಕ್ಯಾಪ್, ಮಾರೆಮ್ಮಕ್ಯಾಪ್, ಹುಣಿಸಿಹಾಳಹುಡ, ಕಸ್ಬೆಕ್ಯಾಂಪ್, ಸೀತಾನಗರ ನಗರ ಕ್ಯಾಂಪ್, ಹೊಸ್ಪೇಟ, ಮರ್ಚೆಡ್, ಗೋನಾಳ, ಪತ್ತೇಪುರ, 7 ಮೇಲ್ ಇಂಡಸ್ಟ್ರೀಯಲ್ ಏರಿಯಾ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

**ರಾಯಚೂರು ಮೇ.14:** ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯಿಂದ 2026–27ನೇ ಶೈಕ್ಷಣಿಕ ಸಾಲಿಗೆ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
ಆಸಕ್ತ ವಿದ್ಯಾರ್ಥಿಗಳು ಇಲಾಖಾ ವೆಬ್‌ಸೈಟ್ ವಿಳಾಸ: https://sw.kar.nic.in ಮೂಲಕ ಜೂನ್ 30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ಶಾಲಾ ಅಥವಾ ಕಾಲೇಜಿನ ಮುಖ್ಯಸ್ಥರಿಂದ ಸಹಿ ಪಡೆದು ಎಲ್ಲಾ ದೃಢೀಕೃತ ದಾಖಲಾತಿಗಳೊಂದಿಗೆ ಸಹಾಯಕ ನಿರ್ದೇಶಕರು ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ ರಾಯಚೂರು ಇವರ ಕಚೇರಿಗೆ ಕಚೇರಿಯ ಸಮಯದಲ್ಲಿ ಸಲ್ಲಿಸಬೇಕು ಎಂದು ರಾಯಚೂರು ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್–1 ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಯಚೂರು ಮೇ.14:** ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯಿಂದ 2026–27ನೇ ಶೈಕ್ಷಣಿಕ ಸಾಲಿಗೆ ಇಲಾಖೆ ವ್ಯಾಪ್ತಿಯಲ್ಲಿ ಬರುವ 1 ರಿಂದ 5ನೇ ತರಗತಿಗೆ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳಿಗೆ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
ಅರ್ಜಿಗಳನ್ನು ಕಚೇರಿಯ ಸಮಯದಲ್ಲಿ ಪಡೆಯಬಹುದಾಗಿದೆ. ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಭರ್ತಿ ಮಾಡಿ, ಎಲ್ಲಾ ದೃಢೀಕೃತ ದಾಖಲಾತಿಗಳೊಂದಿಗೆ ಸಹಾಯಕ ನಿರ್ದೇಶಕರು ಗ್ರೇಡ್–1 ಸಮಾಜ ಕಲ್ಯಾಣ ಇಲಾಖೆ ರಾಯಚೂರು ಇವರ ಕಚೇರಿಗೆ ಕಚೇರಿಯ ಸಮಯದಲ್ಲಿ ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ರಾಯಚೂರು ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್–1 ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಷ್ಠಿತ ಶಾಲೆಗಳ ಪ್ರವೇಶ ಪರೀಕ್ಷೆ ಮೇ.24ಕ್ಕೆ ಮುಂದೂಡಿಕೆ

**ರಾಯಚೂರು ಮೇ.14:** ಸಮಾಜ ಕಲ್ಯಾಣ ಇಲಾಖೆಯಿಂದ 2026–276ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಪ್ರವೇಶಯು ಮೇ.24ಕ್ಕೆ ಮುಂದೂಡಿಕೆ ಮಾಡಲಾಗಿದೆ.
ಪ್ರತಿಷ್ಠಿತ ಶಾಲೆಯ ವಿದ್ಯಾರ್ಥಿಗಳಿಗೆ ಈ ಹಿಂದೆ ಮೇ.17ರಂದು ಪ್ರವೇಶ ಪರೀಕ್ಷೆ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ ಕಾರಣಾಂತರಗಳಿಂದ ಈ ಪ್ರವೇಶ ಪರೀಕ್ಷೆಯನ್ನು ಮುಂದೂಡಿ ಮೇ.24ರ ಭಾನುವಾರ ಬೆಳಿಗ್ಗೆ 9.30ಗಂಟೆಗೆ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಸ್ಟೇಷನ್ ರಸ್ತೆ, ರಾಯಚೂರುನಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ.
ಪ್ರವೇಶ ಪರೀಕ್ಷೆಯ ಪ್ರಮಾಣ ಪತ್ರವನ್ನು ಪಡೆಯಲು ಇಲಾಖಾ ವೆಬ್‌ಸೈಟ್ ವಿಳಾಸ: ತಿತಿತಿ.ತಿ.ಇಚಿಡಿ.ಟಿಛಿ.ಟಿ ನಲ್ಲಿ ಡೌನ ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಂಡೆಗಲ್ಲು ಶಾಸನ ಪತ್ತೆ : ಪುರಾತತ್ಯ ಇಲಾಖೆ ಅಧಿಕಾರಿಗಳ ಭೇಟಿ, ಶಾಸನ ಸಂರಕ್ಷಣೆಗೆ ಅಗತ್ಯ ಕ್ರಮ : ಶೇಜೇಶ್ವರ

**ಸಿರುಗುಪ್ಪ:ಮೇ,14–** ತಾಲೂಕಿನ ನಿಟ್ಟೂರು ಹಾಗೂ ತೆಕ್ಕಲಕೋಟೆ ಪಟ್ಟಣದ 'ಗೌಡ್ರ ಮೂಲೆ' ಪ್ರದೇಶಗಳಲ್ಲಿ ದೊರೆತ ಬಂಡೆಗಲ್ಲು ಶಾಸನ ಸ್ಥಳಕ್ಕೆ ಪುರಾತತ್ಯ ಇಲಾಖೆ ಅಧಿಕಾರಿಗಳ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಹಂಪಿ, ಕಮಲಾಪುರದ ರಾಜ್ಯ ಪುರಾತತ್ವ ಇಲಾಖೆಯ ಜಿಲ್ಲಾ ಪುರಾತತ್ವ ಸರ್ವೇಕ್ಷಣಾಧಿಕಾರಿ ಶೇಜೇಶ್ವರ ಆರ್ ನಾಯಕ ಈ ಸಂದರ್ಭದಲ್ಲಿ ಮಾತನಾಡಿ, ಸಾಮಾಜಿಕ ಜಾಲತಾಣಗಳಲ್ಲಿ ಬಂಡೆಗಲ್ಲು ಶಾಸನದ ವರದಿ ಬಂದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಲಾಗಿದೆ' ಎಂದರು.

ನಿಟ್ಟೂರಿನ ಅಶೋಕನ ಶಿಲಾಶಾಸನದ ಸುಕ್ರದಪ್ಪನ ಬೆಟ್ಟ ಬಳಿಯೇ ರಾಷ್ಟ್ರಕೂಟರ ಒಂದನೇ ಕೃಷ್ಣನ ಕಾಲದ ಈ ಮಹತ್ವದ ದಾಖಲೆ ದೊರೆತಿದೆ. ಅಲ್ಲದೆ ತೆಕ್ಕಲಕೋಟೆಯಲ್ಲಿ ಈಚೆಗೆ ನಡೆದ ಉತ್ಖನನ ಸ್ಥಳದ ಬಳಿಯ ಗೌಡ್ರ ಮೂಲೆಯಲ್ಲಿ ಮತ್ತೊಂದು ಬಂಡೆಗಲ್ಲು ಶಾಸನ ದೊರೆತಿರುವುದು. ಇದು ವಿಜಯನಗರ ಅಥವಾ ಪೂರ್ವದ ವಿಜಯನಗರ ಕಾಲದ ಕೆರೆ ನಿರ್ಮಾಣದ ಶಾಸನ ಎಂದು ತಿಳಿದು ಬಂದಿದೆ ಎಂದು ಸ್ಪಷ್ಟಪಡಿಸಿದರು.




ಬಂಡೆಗಲ್ಲು ಶಾಸನಗಳ ನೆರಳಿಗೆ ಚಾವಣಿ, ನಾಮಫಲಕ, ಸಂರಕ್ಷಣಾ ಕಟ್ಟೆ ಹಾಗೂ ಮಾಹಿತಿ ಫಲಕಗಳನ್ನು ಹಾಕಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.
ಈ ಸಂದರ್ಭದಲ್ಲಿ ಪುರಾತತ್ತ ಸಂರಕ್ಷಣೆ ಇಂಜನಿಯರ್ ಜೆ ಸತೀಶ್, ಸಿಬ್ಬಂದಿ ಹಾಗೂ ಇತಿಹಾಸ ಸಂಶೋಧನಾರ್ಥಿ ಮನೋಹರ ಸಿ.ಎಂ ಇದ್ದರು.

# ಜಮೀನಿಗೆ ನೀರುಣಿಸಲು ಹೋದ ರೈತ ಸೈಬಣ್ಣ ಜಮಾದಾರ ಹಾವು ಕಚ್ಚಿ ಸಾವು

**ಅಫಜಲಪುರ:ಮೇ.14:**ತಾಲೂಕಿನ ಮಾತೋಳಿ ಗ್ರಾಮದಲ್ಲಿ ಸೋಮವಾರ ರಾತ್ರಿ 8:30ಕ್ಕೆ ಹೊಲದಲ್ಲಿ ಕಬ್ಬಿಗೆ ನೀರುಣಿಸಲು ಹೋಗಿದ್ದಾಗ ಹಾವು ಕಚ್ಚಿ ರೈತ ಸೈಬಣ್ಣ ಗುರುಬಾಳ ಜಮಾದಾರ(30) ಮೃತಪಟ್ಟಿದ್ದಾರೆ. ಅಫಜಲಪುರ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಮೃತ ರೈತನಿಗೆ ಪತ್ನಿ, ಇಬ್ಬರು ಮಕ್ಕಳಿದ್ದಾರೆ. ರಾತ್ರಿ ವೇಳೆ ಹೊಲಗದ್ದೆಗಳ ವಿದ್ಯುತ್ ಕೊಡುತ್ತಿದ್ದಾರೆ. ಬೇಸಿಗೆ ಇರುವ ಕಾರಣ ರಾತ್ರಿಯ ತಂಪಿನಲ್ಲಿ ವಿಷ ಸರ್ಪಗಳು ಹೊರಗಡೆ ಬಂದು ಹೀಗೆ ಕಚ್ಚಿ ರೈತರ ಸಾವಿಗೆ ಕಾರಣವಾಗುತ್ತಿವೆ.ಜೇಸ್ಕಾಂ ಇಲಾಖೆಯವರು ದಿನದಲ್ಲಿ ವಿದ್ಯುತ್ ಸಂಪರ್ಕ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.

# ಸತೀಶನ್ ಕೇರಳಂ ಸಾರಥಿ



**ನವದೆಹಲಿ,ಮೇ.14:**ಕೇರಳಂನ ನೂತನ ಮುಖ್ಯಮಂತ್ರಿಯಾಗಿ ವಿ.ಡಿ. ಸತೀಶನ್ ಅವರನ್ನು ಆಯ್ಕೆ ಮಾಡಲಾಗಿದೆ.

ಕೇರಳಂನ ಮುಖ್ಯಮಂತ್ರಿ ಆಯ್ಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷದಲ್ಲಿ ಕಳೆದ ಹತ್ತು ದಿನಗಳಿಂದ ನಡೆದಿದ್ದ ರಾಜಕೀಯ ಹೈಡ್ರಾಮಾಗಳಿಗೆ ಇಂದು ತೆರೆ ಬಿದ್ದಿದ್ದು, ಕಾಂಗ್ರೆಸ್ ಹೈಕಮಾಂಡ್ ಕೇರಳಂನ ಮುಖ್ಯಮಂತ್ರಿಯಾಗಿ ವಿ.ಡಿ. ಸತೀಶನ್ ಅವರನ್ನು ಆಯ್ಕೆ ಮಾಡಿದೆ. ಇನ್ನು ಮುಂದೆ ಕೇರಳಂನ ಸಾರಥ್ಯ ವಿ.ಡಿ. ಸತೀಶನ್ ಅವರದ್ದಾಗಿದೆ.

ಕೇರಳಂನ ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾದ ನಂತರ ಮುಖ್ಯಮಂತ್ರಿ ಹುದ್ದೆಗೆ ಸಂಬಂಧಿಸಿದಂತೆ ಕಾಂಗ್ರೆಸ್‌ನಲ್ಲಿ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಎಐಸಿಸಿ ಪ್ರಧಾನ ಕಾರ್ಯದರ್ಶಿಯಾಗಿರುವ ಕೆ.ಸಿ ವೇಣುಗೋಪಾಲ್, ಕೇರಳ ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿದ್ದ ಸತೀಶನ್ ಹಾಗೂ ಹಿರಿಯ ನಾಯಕ ರಮೇಶ್ ಚನ್ನಿಕಲಾ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಗಳಾಗಿದ್ದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ಕಳೆದ ಹತ್ತು ದಿನಗಳಿಂದ ಕೇರಳಂನ ಮುಖ್ಯಮಂತ್ರಿ ಆಯ್ಕೆಗೆ ಸಂಬಂಧಿಸಿದಂತೆ ನಿರಂತರ ಸಭೆ, ಸಮಾಲೋಚನೆಗಳನ್ನು ನಡೆಸಿದ್ದರಾದರೂ ಮುಖ್ಯಮುಂತ್ರಿ ಅಭ್ಯರ್ಥಿಯ ಆಯ್ಕೆಗೆ ಸಂಬಂಧಿಸಿದಂತೆ ಒಮ್ಮತಕ್ಕೆ ಬರಲು ಸಾಧ್ಯವಾಗಿರಲಿಲ್ಲ.

ಇಂದು ಈ ಇಬ್ಬರು ನಾಯಕರು ಹಾಗೂ ಕೇರಳಂ ನಾಯಕರುಗಳ ಜತೆ ಚರ್ಚಿಸಿ ಅಂತಿಮವಾಗಿ ವಿ.ಡಿ. ಸತೀಶನ್ ಅವರನ್ನು ಮುಖ್ಯಮಂತ್ರಿ ಗಾದೆಗೆ ಆಯ್ಕೆ ಮಾಡಿದರು.

ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಗಾದೆಗೆ ಸತೀಶನ್ ಅವರನ್ನು ಆಯ್ಕೆ ಮಾಡಿರುವ ಬಗ್ಗೆ ಕಾಂಗ್ರೆಸ್ ಭವನದಲ್ಲಿಂದು ನಡೆದ ಸುದ್ದಿಗೋಷ್ಠಿ ನಡೆಸಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೇರಳಂನ ಕಾಂಗ್ರೆಸ್ ಉಸ್ತುವಾರಿ ದೀಪ ಮುನ್ಷಿ ಅವರು ಅಧಿಕೃತ ಘೋಷಣೆ ಮಾಡಿದರು.

ತಿರುವನಂತಪುರದಲ್ಲಿ ಇಂದು ಸಂಜೆ 4 ಗಂಟೆಗೆ ಕೇರಳಂನ ಕಾಂಗ್ರೆಸ್‌ನ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಅಲ್ಲಿ ಹೈಕಮಾಂಡ್ ಆಯ್ಕೆ ಮಾಡಿರುವ ವಿ.ಡಿ. ಸತೀಶನ್ ರವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡುವ ಪ್ರಕ್ರಿಯೆ ನಡೆಯಲಿದೆ.

ಕೇರಳಂನ ನಿಧಾನಸಭಾ ಚುನಾಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿದ್ದ ನಂತರ ನಡೆದ ಕಾಂಗ್ರೆಸ್‌ನ ಶಾಸಕಾಂಗ ಕೇರಳಂನ ಮುಖ್ಯಮಂತ್ರಿ ಆಯ್ಕೆಯನ್ನು ಹೈಕಮಾಂಡ್‌ಗೆ ಬಿಡುವ ನಿರ್ಧಾರ ಕೈಗೊಳ್ಳಲಾಗಿತ್ತು.

ಕೇರಳಂನ ವಿಧಾನಸಭಾ ಕ್ಷೇತ್ರ ಫಲಿತಾಂಶ ಮೇ 3 ರಂದು ಪ್ರಕಟವಾಗಿದ್ದರೂ ಮುಖ್ಯಮಂತ್ರಿ ಆಯ್ಕೆ ವಿಳಂಬವಾಗಿತ್ತು. ಇದು ಬಿಜೆಪಿ ಸೇರಿದಂತೆ ಪ್ರತಿಪಕ್ಷಗಳ ಟೀಕೆಗೂ ಕಾರಣವಾಗಿತ್ತು.
ಸಿಎಂ ಆಯ್ಕೆ ವಿಳಂಬವಾಗುತ್ತಿರುವ ಬಗ್ಗೆ ಬೇಸತ್ತು ತಮಿಳುನಾಡಿನ ಹಲವೆಡೆ ಸಿಎಂ ಅಭ್ಯರ್ಥಿಗಳ ಪರ ವಿರೋಧ ಪೋಸ್ಟರ್ ವಾರ್ ಸಹ ನಡೆದು ಕಾಂಗ್ರೆಸ್‌ನ ಒಳ ಜಗಳ ಬೀದಿಗೆ ಬಂದಿತ್ತು.

ಲೋಕಸಭೆಯ ವಿರೋಧ ಪಕ್ಷದ ನಾಯಕರಾಗಿದ್ದ ರಾಹುಲ್‌ಗಾಂಧಿ ಅವರು ಕೆ.ಸಿ. ವೇಣುಗೋಪಾಲ್ ಆಪ್ತರಾಗಿದ್ದು, ರಾಹುಲ್‌ಗಾಂಧಿ, ಕೆ.ಸಿ. ವೇಣುಉಗೋಪಾಲ್ ಪರ ಒಲವು ತೋರಿದ್ದರು. ಆದರೆ ಸಿಎಂ ಪಟ್ಟಕ್ಕಾಗಿ ಪಟ್ಟು ಹಿಡಿದ ವಿ.ಡಿ. ಸತೀಶನ್ ನನಗೆ ಸಿಎಂ ಹುದ್ದೆ ನೀಡದಿದ್ದರೆ ಉಪಮುಖ್ಯಮಂತ್ರಿ ಹುದ್ದೆಯೂ ಬೇಡ. ಸಚಿವ ಸ್ಥಾನವನ್ನು ನಾವು ಅಲಂಕರಿಸುವುದಿಲ್ಲ. ಶಾಸಕರಾಗಿ ಅಷ್ಟೇ ಮುಂದುವರೆಯುತ್ತನೆ ಎಂಬ ಬಿಗಿ ನಿಲುವು ತಾಳಿದ್ದು, ಮುಖ್ಯಮಂತ್ರಿ ಆಯ್ಕೆ ಕಗ್ಗಂಟಾಗಲು ಕಾರಣವಾಗಿತ್ತು.

ಇಂದು ಅಂತಿಮವಾಗಿ ಕೇರಳಂ ನಾಯಕರ ಜತೆ ಸಭೆ ನಡೆಸಿ ಅವರ ಸಲಹೆಯಂತೆ ವಿ.ಡಿ. ಸತೀಶನ್ ಅವರನ್ನು ಕೇರಳಂನ ನೂತನ ಮುಖ್ಯಮಂತ್ರಿಯಾಗಿ ಕಾಂಗ್ರೆಸ್ ಹೈಕಮಾಂಡ್ ಆಯ್ಕೆ ಮಾಡಿತು.
ಕೇರಳದಲ್ಲಿ ಕಾಂಗ್ರೆಸ್‌ನ ಮಿತ್ರ ಪಕ್ಷವಾಗಿರುವ ಮುಸ್ಲಿಂ ಲೀಗ್ ಸಹ ಸತೀಶನ್ ಪರ ಒಲವು ತೋರಿತ್ತು. ಹಾಗಾಗಿ ಮೈತ್ರಿ ಪಕ್ಷದ ಒತ್ತಡಕ್ಕೆ ಕಾಂಗ್ರೆಸ್ ಮಣಿದು ಸತೀಶನ್ ಅವರನ್ನು ಕೇರಳಂನ ಆಡಳಿತ ಚುಕ್ಕಾಣಿಯನ್ನಾಗಿ ಆಯ್ಕೆ ಮಾಡಿದೆ.
ಕೇರಳಂನ ಮುಖ್ಯಮಂತ್ರಿ ಹುದ್ದೆಯ ನಿರೀಕ್ಷೆಯಲ್ಲಿದ್ದ ವೇಣುಗೋಪಾಲ್ ಅವರಿಗೆ ಹೈಕಮಾಂಡ್ ನಿರ್ಧಾರ ನಿರಾಸೆ ತಂದಿದೆ.
140 ಸದಸ್ಯ ಬಲದ ಕೇರಳಂನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎ ಮೈತ್ರಿಕೂಟ 102 ಸ್ಥಾನಗಳೊಂದಿಗೆ ಭರ್ಜರಿ ಗೆಲುವು ಸಾಧಿಸಿತ್ತು.

ವೇಣು ಗೋಪಾಲ್‌ಗೆ ಎಐಸಿಸಿ ಅಧ್ಯಕ್ಷ ಪಟ್ಟ ಸಾಧ್ಯತೆ
ಕೇರಳಂನ ಮುಖ್ಯಮಂತ್ರಿ ಗಾದಿ ಕೈ ತಪ್ಪಿಸುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ರವರಿಗೆ ಎಐಸಿಸಿ ಅಧ್ಯಕ್ಷ ಸ್ಥಾನ ಸಿಗುವ ಸಾಧ್ಯತೆ ಇದೆ.
ಎಐಸಿಸಿಯ ಹಾಲಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನಖರ್ಗೆ ಅವರ ಅವಧಿ ಮುಂದಿನ ವರ್ಷ ಮುಗಿಯಲಿದ್ದು, ಖರ್ಗೆ ಅವರ ನಂತರ ಕೆ.ಸಿ. ವೇಣುಗೋಪಾಲ್ ಎಐಸಿಸಿ ಅಧ್ಯಕ್ಷರಾಗಿರುವ ಸಾಧ್ಯತೆಗಳಿವೆ.
ಕೇರಳಂನ ಮುಖ್ಯಮಂತ್ರಿ ಹುದ್ದೆಯ ರೇಸ್‌ನಲ್ಲಿದ್ದ ಕೆ.ಸಿ.ವೇಣುಗೋಪಾಲ್ ಅವರಿಗೆಎಐಸಿಸಿ ಅಧ್ಯಕ್ಷಗಿರಿಯ ಭರವಸೆ ನೀಡಿ ಅವರನ್ನು ಸಮಾಧಾನಪಡಿಸಿ ಕಾಂಗ್ರೆಸ್ ಹೈಕಮಾಂಡ್ ಸತೀಶನ್‌ನ ಅವರನ್ನು ನೂತನ ಮುಖ್ಯಮಂತ್ರಿಯನ್ನಾಗಿ ಆಯ್ಕೆ ಮಾಡಿತು ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.
ಕೇರಳಂನ ನೂತನ ಮುಖ್ಯಮಂತ್ರಿಯಾಗಿ ಆಯ್ಕೆಯಾಗಿರುವ ವಿ.ಡಿ.ಸತೀಶನ್ ಕಾಲೇಜು ದಿನಗಳಿಂದಲೇ ವಿದ್ಯಾರ್ಥಿ ಕಾಂಗ್ರೆಸ್‌ನಲ್ಲಿ ಸಕ್ರಿಯವಾಗಿದ್ದು, ಎನ್‌ಎಸ್‌ಯುಐನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದರು.
1996 ರಲ್ಲಿ ಅವರು ಪರವೂರು ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಪರಾಭವಗೊಂಡಿದ್ದರು. ನಂತರ 2001ರಲ್ಲಿ ಮತ್ತೆ ಚುನಾವಣೆಗೆ ಸ್ಪರ್ಧಿಸಿ ಶಾಸಕರಾಗಿ ಆಯ್ಕೆಯಾಗಿದ್ದರು.

ಅಲ್ಲಿಂದ ಸತತ ಆರು ಬಾರಿ ತರವೂರು ಕ್ಷೇತ್ರದಿಂದಲೇ ಗೆಲುವು ಸಾಧಿಸಿದ್ದರು. 2021 ರಲ್ಲಿ ಅವರು ಕೇರಳಂನ ವಿಧಾನಸಭೆಯ ವಿರೋಧ ಪಕ್ಷದ ನಾಯಕರಾಗಿ ಆಯ್ಕೆಯಾಗಿದ್ದರು. ವಿರೋಧ ಪಕ್ಷದ ನಾಯಕರಾಗಿ ಅವರು ಕೇರಳಂನಲ್ಲಿ ವ್ಯಾಪಕ ಪ್ರವಾಸ ನಡೆಸಿ ಎಡ ಪಕ್ಷಗಳ ದುರಾಡಳಿತ ವಿರುದ್ಧ ಜಾಗೃತಿ ಮೂಡಿಸಿ ಕಾಂಗ್ರೆಸ್ ಪಕ್ಷವನ್ನು ಚುನಾವಣೆಯಲ್ಲಿ ಗೆಲ್ಲಿಸಲು ಶ್ರಮಿಸಿದ್ದರು.
ನೂತನ ಮುಖ್ಯಮಂತ್ರಿ ವಿ.ಡಿ.ಸತೀಶನ್ ಅವರು 1954 ರಲ್ಲಿ ಹುಟ್ಟಿದ್ದು, ಅವರಿಗೆ ಈಗ 62 ವರ್ಷ.

# ಇಂಧನ ದರ ಏರಿಕೆ ಅನಿವಾರ್ಯ ಭೀತಿ:ಆರ್‌ಬಿಐ ಸುಳಿವು



**ನವದೆಹಲಿ,ಮೇ.14–** ಮಧ್ಯಪ್ರಾಚ್ಯ ಬಿಕ್ಕಟ್ಟು ದೀರ್ಘಕಾಲದವರೆಗೆ ಮುಂದುವರಿದರೆ ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಹೆಚ್ಚಿಸಬೇಕಾಗಬಹುದು ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಗವರ್ನರ್ ಸಂಜಯ್ ಮಲ್ಹೋತ್ರಾ ಮುನ್ಸೂಚನೆ ನೀಡಿದ್ದಾರೆ.

ವಿದೇಶಿ ವಿನಿಮಯ ಉಳಿಸಲು ಇಂಧನ ಬಳಕೆ ಮತ್ತು ಖಾದ್ಯ ತೈಲದ ಬಳಕೆ ಕಡಿಮೆ ಮಾಡುವುದರ ಜೊತೆಗೆ ಇತರ ಕಠಿಣ ಕ್ರಮಗಳಿಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿರುವ ಬೆನ್ನಲ್ಲೇ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಾಗುವ ಸಾಧ್ಯತೆ ಇದೆ ಎಂದಿದ್ದಾರೆ.

ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ನಡೆದ ಸಮ್ಮೇಳನದಲ್ಲಿ ಮಾತನಾಡಿದ ಸಂಜಯ್ ಮಲ್ಹೋತ್ರಾ, ಮಧ್ಯಪ್ರಾಚ್ಯ ಸಂಘರ್ಷ ಮತ್ತು ಪ್ರಮುಖ ಕಚ್ಚಾ ತೈಲ ಸಾಗಾಣೆ ಮಾಡುವ ಹೋರ್ಮುಜ್ ಜಲಸಂಧಿಯ ಮೇಲಿನ ದಿಗ್ಬಂಧನ ತೈಲ ಮತ್ತು ಅನಿಲ ಪೂರೈಕೆ ಅಡ್ಡಿಪಡಿಸಿದೆ, ಇದರಿಂದಾಗಿ ಇಂಧನ ಬೆಲೆಗಳು ಹೆಚ್ಚಿವೆ, ಹೀಗಾಗಿ ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಾಗಬಹುದು ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರ ಆರ್ಥಿಕವಾಗಿ ವಿವೇಕಯುತವಾಗಿದೆ ಮತ್ತು ಆರ್ಥಿಕ ಬಲವರ್ಧನೆಯ ಹಾದಿಯಲ್ಲಿದೆ. ಆದರೂ ಎದುರಾಗುತ್ತಿರುವ ಸಂಘರ್ಷ ತಡೆಗೆ ಕ್ರಮ ಅನಿವಾರ್ಯವಾಗಿದೆ ಎಂದು ಹೇಳಿದ್ದಾರೆ

ಭಾರತ, ಇಂಧನ ಮತ್ತು ರಸಗೊಬ್ಬರಗಳ ಆಮದಿನ ಮೇಲೆ ಹೆಚ್ಚು ಅವಲಂಬಿತವಾಗಿದೆ. ಅಮೆರಿಕ, ಇರಾನ್, ಮತ್ತು ಇಸ್ರೇಲ್ ನಡುವೆ ಕಳೆದ ನಾಲ್ಕೈದು ತಿಂಗಳಿನಿಂದ ನಡೆಯುತ್ತಿರುವ ಸಂಘರ್ಷ ಪ್ರಸ್ತುತ ಅಡಚಣೆಗಳು ಭಾರತದ ಮೇಲೆ ಪರಿಣಾಮ ಬೀರಲು ಪ್ರಾರಂಭಿಸಿವೆ ಎಂದು ತಿಳಿಸಿದ್ದಾರೆ

ಮಧ್ಯಪ್ರಾಚ್ಯದಲ್ಲಿನ ಸಂಘರ್ಷ ಮುಂದುವರಿದರೆ ಕೇಂದ್ರ ಸರ್ಕಾರ ಅನಿವಾರ್ಯವಾಗಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಹೆಚ್ಚಿಸದೆ ಅನ್ಯಮಾರ್ಗವಿಲ್ಲ,"ಸರ್ಕಾರ ಈ ಬೆಲೆ ಹೆಚ್ಚಳಗಳಲ್ಲಿ ಕೆಲವನ್ನು ವಾಸ್ತವವಾಗಿ ವರ್ಗಾಯಿಸುವುದು ಸಮಯದ ವಿಷಯ" ಎಂದು ಹೇಳಿದ್ದಾರೆ

ಫೆಬ್ರವರಿ 28 ರಂದು ಆರಂಭವಾದ ಮಧ್ಯಪ್ರಾಚ್ಯ ಸಂಘರ್ಷದ ಹೊರತಾಗಿಯೂ ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಚಿಲ್ಲರೆ ಬೆಲೆಗಳನ್ನು ಹೆಚ್ಚಿಸಿಲ್ಲ, ಬದಲಾಗಿ ವಾಹನ ಸವಾರರ ಹಿತ ಕಾಪಾಡಲು ಅಗತ್ಯ ಕ್ರಮ ಕೈಗೊಳ್ಳುತ್ತಿದೆ ಎಂದಿದ್ದಾರೆ

**ರೂಪಾಯಿ ಮೌಲ್ಯ ತೀವ್ರ ಕುಸಿತ:** ಮಧ್ಯ ಪ್ರಾಚ್ಯದಲ್ಲಿ ಎದುರಾಗಿರುವ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ರೂಪಾಯಿ ಮೌಲ್ಯ ಮತ್ತಷ್ಟು ಕುಸಿತ ಕಂಡಿದೆ, ಈ ಹಿನ್ನೆಲೆಯಲ್ಲಿ ವಿದೇಶಿ ವಿನಿಮಯ ಮತ್ತು ವಿದೇಶ ಪ್ರವಾಸ ರದ್ದುಗೊಳಿಸಲು ಕೇಂದ್ರ ಸರ್ಕಾರ ಜನರಿಗೆ ಸೂಚಿಸಿದೆ

ರೂಪಾಯಿ ಮೌಲ್ಯ ದೇಶದಲ್ಲಿ ಪ್ರಸ್ತುತ ಅಮೇರಿಕಾ ಡಾಲರ್ ವಿರುದ್ಧ 95 ಅಂಕಕ್ಕಿಂತ ಕೆಳಗಿದೆ. ಮಧ್ಯಪ್ರಾಚ್ಯ ಸಂಘರ್ಷದ ನಂತರ ದಿನದಿಂದ ದಿನಕ್ಕೇ ರೂಪಾಯಿ ಮೌಲ್ಯ ಕುಸಿತ ಕಾಣುತ್ತಿದೆ, ಇದು ಕೇಂದ್ರ ಸರ್ಕಾರವನ್ನು ಆತಂಕಕ್ಕೆ ಗುರಿ ಮಾಡಿದೆ

# ನೀಟ್ ಪರೀಕ್ಷೆ: ಕೇಂದ್ರ ಬಿಜೆಪಿ ವೈಪಲ್ಯ ಖಂಡಿಸಿ ಪ್ರತಿಭಟನೆ



**ಮೈಸೂರು: ಮೇ.14:–** ನೀಟ್ ಪರೀಕ್ಷೆ ನಡೆಯುವ ಮೊದಲೇ ಪ್ರಶ್ನೆಪತ್ರಿಕೆ ಸೋರಿಕೆ ಆಗಲು ಕೇಂದ್ರ ಸರ್ಕಾರದ ವೈಫಲ್ಯ ಕಾರಣವೆಂದು ಆರೋಪಿಸಿ ಸಂಸದರ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ಯುವ ಕಾಂಗ್ರೆಸ್ ಕಾರ್ಯಕರ್ತರನ್ನು ಬಂಧಿಸಿ ಬಿಡುಗಡೆಗೊಳಿಸಿದರು.

ಕಾಡಾ ಕಚೇರಿ ಮುಖ್ಯ ದ್ವಾರದ ಬಳಿ ಪ್ರತಿಭಟನೆ ನಡೆಸಿ ಸಂಸದ ಯದವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕಚೇರಿಯತ್ತ ನುಗ್ಗಲು ಯತ್ನಿಸಿ ಈ ವೇಳೆ ಸ್ಥಳದಲ್ಲಿದ್ದ ಪೊಲೀಸರು ಬ್ಯಾರಿಕೇಡ್‌ಗಳನ್ನು ಅಡ್ಡ ಇಟ್ಟು ಪ್ರತಿಭಟನಾಕಾರರನ್ನು ತಡೆದರು. ಈ ವೇಳೆ ದಾರಿಯಲ್ಲೇ ಕುಳಿತು ಪ್ರತಿಭಟನೆಗೆ ಮುಂದಾದ ಪ್ರತಿಭಟನಾಕರನ್ನು ವಶಕ್ಕೆ ಪಡೆದ ಪೊಲೀಸರು ವಾಹನದಲ್ಲಿ ಕರೆದೊಯ್ದರು.
ಯುವ ಕಾಂಗ್ರೆಸ್ ಮುಖಂಡ ಹೊಯ್ಸಳ ಮಾತನಾಡಿ, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಮಕ್ಕಳ ಭವಿಷ್ಯದ ಜತೆ ಆಟ ಆಡುತ್ತಿದೆ. ಕೇಂದ್ರ ಸರ್ಕಾರದ ವೈಪಲ್ಯದಿಂದಲೇ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದ್ದು, ಕೇಂದ್ರ ಶಿಕ್ಷಣ ಸಚಿವರು ಹೊಣೆ ಹೊತ್ತು ಈ ಕೂಡಲೇ ರಾಜೀನಾಮೆ ನೀಡಬೇಕು. ಮರು ಪರೀಕ್ಷೆ ಮುಂದಾಗಿರುವ ಕೇಂದ್ರದ ನಡೆ ಖಂಡನೀಯ ಎಂದು ಕಿಡಿಕಾರಿದರು.

ಯುವ ಕಾಂಗ್ರೆಸ್ ಗ್ರಾಮಾಂತರ ಜಿಲ್ಲಾ ಉಪಾಧ್ಯಕ್ಷ ಶಶಾಂಕ್ ಗೌಡ, ರೋಹಿತ್ ಸಿಂಗ್, ಬಸವಣ್ಣ, ರಹಿಮ್, ಚಾಮರಾಜ ಕ್ಷೇತ್ರ ಉಪಾಧ್ಯಕ್ಷ ಮನೋಜ್, ಬ್ಲಾಕ್ ಅಧ್ಯಕ್ಷ ಸಯ್ಯದ್ ಸಕ್ಲೇನ್, ವಾರ್ಡ್ ಅಧ್ಯಕ್ಷರಾದ ಕರಣ್ ಶ್ರೀಕಂಠಯ್ಯ, ವಿವೇಕ್, ನಿತಿನ್, ರವೀಶ್, ಸಾಯೀದ್, ಅಭಿ ಇನ್ನಿತರರು ಇದ್ದರು.

# ನೀಟ್ ವಿದ್ಯಾರ್ಥಿಗಳಿಗೆ ಅನ್ಯಾಯ : ಡಾ. ಎಸ್.ಬಲಬೀರ ಸಿಂಗ್



**ಬೀದರ್: ಮೇ.14:** ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದು ಹಾಗೂ ಈಗಾಗಲೇ ನಡೆದ ಪರೀಕ್ಷೆ ರದ್ದು ಮಾಡಿರುವುದು ವಿದ್ಯಾರ್ಥಿ–ವಿದ್ಯಾರ್ಥಿನೀಯರಿಗೆ ದೊಡ್ಡ ಅನ್ಯಾಯವಾಗಿದೆ. ವರ್ಷವೀಡಿ ಪರಿಶ್ರಮ ಪಟ್ಟು ಲಕ್ಷಾಂತರ ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುತ್ತಾರೆ.

ಮತ್ತೊಮ್ಮೆ ಪರೀಕ್ಷೆ ಬರೆಯಬೇಕಾದರೆ ಮಾನಸಿಕವಾಗಿ ಖಿನ್ನತೆಗೆ ಒಳಗಾಗುತ್ತಾರೆ. ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡುವುದು ಅಪರಾಧವಾಗಿದೆ. ಪ್ರಶ್ನೆ ಪತ್ರಿಕೆ ಸೋರಿಕೆಯಲ್ಲಿ ಭಾಗಿಯಾದವರ ವಿರುದ್ಧ ಕಠಿಣ ಕ್ರಮ ಜರುಗಿಸಿ ಮುಂದಿನ ದಿನಗಳಲ್ಲಿ ಇಂತಹ ಕೃತ್ಯ ನಡೆಯದಂತೆ ನೋಡಿಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಈ ಸಂಕಷ್ಟದಲ್ಲಿ ವಿದ್ಯಾರ್ಥಿಗಳಿಗೆ ಬೆಂಬಲ ನೀಡುವ ಉದ್ದೇಶದಿಂದ ಗುರು ನಾನಕ ಪದವಿ ಪೂರ್ವ ಕಾಲೇಜು ನೀಟ್ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮತ್ತು ಆಫ್‌ಲೈನ್ ಕೊಚಿಂಗ್ ಕೊಡಲು ಮುಂದಾಗಿದೆ ಎಂದು ಶ್ರೀ ನಾನಕ ಝಿರಾ ಸಹೇಬ್‌ನ ಅಧ್ಯಕ್ಷ ಡಾ.ಎಸ್.ಬಲಬೀರ್‌ಸಿಂಗ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೋರನಹಳ್ಳಿಯಲ್ಲಿ ಅಕ್ರಮ ಮರಂ ಗಣಿಗಾರಿಕೆ ಆರೋಪ ಅಧಿಕಾರಿಗಳ ಮೌನಕ್ಕೆ ಸಾರ್ವಜನಿಕರ ಆಕ್ರೋಶ

**ಯಾದಗಿರಿ : ಮೇ.14:**ಜಿಲ್ಲೆಯ ಶಹಾಪುರ ತಾಲೂಕಿನ ದೋರನಹಳ್ಳಿ ಪಟ್ಟಣದ ವರ ವಲಯದಲ್ಲಿ ನಡಿತಿರುವ ಅಕ್ರಮ ಮರಂ ಗಣಿಗಾರಿಕೆ ಭಾರೀ ಪ್ರಮಾಣದಲ್ಲಿ ನಡೆಯುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ಗ್ರಾಮದ ಸರ್ವೆ ನಂ. 550ರಲ್ಲಿ ಸರ್ಕಾರದ ನಿಯಮಗಳನ್ನು ಸಂಪೂರ್ಣ ಉಲ್ಲಂಘಿಸಿ ನಿರಂತರವಾಗಿ ಮರಂ ತೆಗೆಯಲಾಗುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ.ಅಕ್ರಮ ಗಣಿಗಾರಿಕೆಯಿಂದ ಸುತ್ತಮುತ್ತಲಿನ ರೈತರ ಜಮೀನುಗಳು ಹಾನಿಗೊಳಗಾಗುತ್ತಿದ್ದು, ಭೂಮಿಯ ಸ್ವರೂಪವೇ ಬದಲಾಗುತ್ತಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸರ್ಕಾರದ ಅನುಮತಿ, ಪರಿಸರ ನಿಯಮಗಳು ಹಾಗೂ ಭೂ ಸಂರಕ್ಷಣಾ ಕಾಯ್ದೆಗಳನ್ನು ಲೆಕ್ಕಿಸದೇ ಮನಬಂದಂತೆ ಮರಂ ಸಾಗಣೆ ನಡೆಯುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ.
ಗ್ರಾಮದ ಸರ್ಕಾರಿ ಆಸ್ಪತ್ರೆ ಟೋಕೋಪುರ ರಸ್ತೆಯ ಸಮೀಪ, ಕ್ಯಾನಲ್ ಪಕ್ಕದಲ್ಲಿರುವ ಜಮೀನಿನಲ್ಲಿ ಈ ಅಕ್ರಮ ಚಟುವಟಿಕೆ ನಡೆಯುತ್ತಿದ್ದು, ಸಾಬಣ್ಣ ವಿಭೂತಿಹಳ್ಳಿ ಅವರ ನೇತೃತ್ವದಲ್ಲಿ ಮರಂ ಗಣಿಗಾರಿಕೆ ಸಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಜೆಸಿಬಿ ಯಂತ್ರಗಳ ಮೂಲಕ ಮರಂ ತೆಗೆಯಲಾಗುತ್ತಿದ್ದು, ಒಂದು ಟಿಪ್ಪರ್ ತುಂಬಿಸಲು ಸುಮಾರು ?3,000 ವರೆಗೆ ಹಣ ಪಡೆಯಲಾಗುತ್ತಿದೆ ಎನ್ನಲಾಗಿದೆ. ಅಲ್ಲದೆ ಹಳ್ಳಿಯಿಂದ ಬೇರೆ ಊರುಗಳಿಗೆ ಸಾಗಣೆ ಮಾಡುವ ಪ್ರತಿ ಟಿಪ್ಪರ್‌ಗೆ 9,000ಕ್ಕೂ ಹೆಚ್ಚು ದರ ವಸೂಲಿ ಮಾಡಲಾಗುತ್ತಿದೆ ಎಂದು ಹೇಳಲಾಗಿದೆ. ಈ ಕುರಿತು ಮಾದಿಗ ದಂಡೋರ (ರಿ) ಹೋರಾಟ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ಮಲ್ಲಿಕಾರ್ಜುನ ಸಾವುರ್ ಮಾತನಾಡಿ, "ಅಕ್ರಮ ಗಣಿಗಾರಿಕೆ ಬಹಿರಂಗವಾಗಿ ನಡೆಯುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು



ಮೌನ ವಹಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾನೂನು ಉಲ್ಲಂಘನೆ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು.

ಸ್ಥಳೀಯ ಸಾರ್ವಜನಿಕರು ಕೂಡ ಜಿಲ್ಲಾಡಳಿತ ಹಾಗೂ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಅಕ್ರಮ ಮರಂ ಗಣಿಗಾರಿಕೆಗೆ ಕಡಿವಾಣ ಹಾಕಬೇಕೆಂದು ಆಗ್ರಹಿಸಿದ್ದಾರೆ.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಪದೋನ್ನತಿ ಹೊಂದಿ ಮುಖ್ಯಗುರುಗಳಾಗಿ ಆಗಮಿಸಿದ ಶರಣಬಸಪ್ಪಗೆ ಸನ್ಮಾನ



**ಸೈದಾಪುರ:ಮೇ.14:**ಪಟ್ಟಣದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಪದನ್ನೊತ್ತಿಹೊಂದಿ ಮುಖ್ಯ ಗುರುಗಳಾಗಿ ಆಗಮಿಸಿದ ಶರಣಬಸಪ್ಪ ರವರಿಗೆ ಸೈದಾಪುರ ವಲಯದ ಶಿಕ್ಷಕರು, ಶಿಕ್ಷಣಾಭಿವಾನಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಸನ್ಮಾನಿಸಿ ಆತ್ಮೀಯವಾಗಿ ಸ್ವಾಗತಿಸಿದರು.

ಶಾಲಾ ಆವರಣದಲ್ಲಿ ಆಯೋಜಿಸಿದ್ದ ಸರಳ ಸಮಾರಂಭದಲ್ಲಿ ಶರಣಬಸಪ್ಪ ರವರಿಗೆ ಹೂಮಾಲೆ ಹಾಕಿ, ಶಾಲು ಹೊದಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಇಸಿಓ ಮಲ್ಲಿಕಾರ್ಜುನ ಕಾವಲಿ, ಶರಣಬಸಪ್ಪ ಅವರು ಶಿಕ್ಷಣ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿದ್ದು, ಅವರ ಮಾರ್ಗದರ್ಶನದಿಂದ ಶಾಲೆಯ ಶೈಕ್ಷಣಿಕ ಗುಣಮಟ್ಟ ಮತ್ತಷ್ಟು ಅಭಿವೃದ್ಧಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಮುಖ್ಯ ಗುರು ಶರಣ ಬಸಪ್ಪ ಅವರು ಮಾತನಾಡಿ, ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಶಿಕ್ಷಕರು ಹಾಗೂ ಪಾಲಕರ ಸಹಕಾರ ಅಗತ್ಯವಾಗಿದೆ. ಶಾಲೆಯನ್ನು ಮಾದರಿ ಶಿಕ್ಷಣ ಸಂಸ್ಥೆಯಾಗಿ ರೂಪಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು. ಈ ವೇಳೆ ವಿದ್ಯಾವರ್ಧಕ ಪ್ರೌಢ ಶಾಲಾ ಮುಖ್ಯಗುರು ಲಿಂಗರೆಡ್ಡಿ ನಾಯಕ್, ಬಸರೆಡ್ಡಿ ಸಾವೂರು, ಯಂಕಪ್ಪ ದೊಡ್ಮನಿ, ಸಿಆರ್.ಪಿ. ಲಿಂಗರೆಡ್ಡಿ ಗೊಬ್ಬುರು, ಮಧುಸೂಧನ ಕುಲಕರ್ಣಿ, ಷಣ್ಮುಖ, ಚನ್ನಮ್ಮ , ಮಲ್ಲಿಕಾರ್ಜುನ, ಸಿದ್ರಾಮ ತೊಗಟವೀರ, ಶಿವಕಾಂತಮ್ಮ, ವೆಂಕಟೇಶ ಆನಂಪಲ್ಲಿ ಸೇರಿದಂತೆ ಸೈದಾಪುರ ವಲಯದ ಶಿಕ್ಷಕರು, ಶಾಲೆಯ ಸಿಬ್ಬಂದಿ, ಪೋಷಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಮೇ 18ರಂದು ಭವ್ಯ ಪ್ರತಿಭಾ ಪುರಸ್ಕಾರ ಹಾಗೂ ಸರ್ವ ಸದಸ್ಯರ ಮಹಾಸಭೆ

**ಯಾದಗಿರಿ :ಮೇ.14:** ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಆಶ್ರಯದಲ್ಲಿ ಮೇ 18ರಂದು ಜಿಲ್ಲಾ ಪತ್ರಿಕಾ ಭವನದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳ ಸಾಧನೆಯನ್ನು ಕೊಂಡಾಡುವ ಉದ್ದೇಶದಿಂದ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಸಮಾರಂಭ ಹಾಗೂ ಸಂಘದ ಸರ್ವ ಸದಸ್ಯರ ಮಹಾಸಭೆ ವೈಭವದಿಂದ ನಡೆಯಲಿದೆ.



ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ 11 ಗಂಟೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದ ಜಿಲ್ಲೆಯ ಪತ್ರಕರ್ತರ 8 ಪ್ರತಿಭಾನ್ವಿತ ಮಕ್ಕಳಿಗೆ ತಲಾ 5 ಸಾವಿರ ನಗದು ಬಹುಮಾನ ನೀಡಿ ಆತ್ಮೀಯ ಸನ್ಮಾನ ನೆರವೇರಿಸಲಾಗುವುದು. ವಿದ್ಯಾಭ್ಯಾಸ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಮೂಲಕ ಶಿಕ್ಷಣ ಪ್ರೋತ್ಸಾಹಕ್ಕೆ ಸಂಘ ಮತ್ತೊಮ್ಮೆ ಬದ್ಧತೆಯನ್ನು ಪ್ರದರ್ಶಿಸುತ್ತಿದೆ.

ಇದಾದ ಬಳಿಕ ಮಧ್ಯಾಹ್ನ 12 ಗಂಟೆಗೆ ಸಂಘದ ಸರ್ವ ಸದಸ್ಯರ ಮಹಾಸಭೆ ಜರುಗಲಿದ್ದು, 2024-25ನೇ ಸಾಲಿನ ವಾರ್ಷಿಕ ಲೆಕ್ಕ ಪರಿಶೋಧನಾ ವರದಿ ಮಂಡನೆ ಹಾಗೂ ಅನುವೋದನೆ, ಜೊತೆಗೆ ಸಂಘದ ವಾರ್ಷಿಕ ಕಾರ್ಯಚಟುವಟಿಕೆಗಳ ಸಮಗ್ರ ವರದಿ ಮಂಡನೆ ಮತ್ತು ಅನುಮೋದನೆ ಪ್ರಕ್ರಿಯೆ ನಡೆಯಲಿದೆ.

ಸಂಘದ ಅಧ್ಯಕ್ಷರಾಗಿ ಜವಾಬ್ದಾರಿ ಸ್ವೀಕರಿಸಿದ ನಂತರ ಸತತ ನಾಲ್ಕನೇ ಬಾರಿಗೆ ಸರ್ವ ಸದಸ್ಯರ ಸಭೆ ಆಯೋಜಿಸಲಾಗುತ್ತಿದ್ದು, ಸಂಘದ ಪಾರದರ್ಶಕ ಆಡಳಿತ ವ್ಯವಸ್ಥೆ, ಜವಾಬ್ದಾರಿತನ ಹಾಗೂ ಸಂಘಟನಾ ಶಿಸ್ತಿನ ಪ್ರತೀಕವಾಗಿ ವಾರ್ಷಿಕ ಲೆಕ್ಕಪತ್ರ ಮತ್ತು ಕಾರ್ಯ ವರದಿಗಳನ್ನು ಸದಸ್ಯರ ಮುಂದಿಡಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರತಿಭಾವಂತ ಮಕ್ಕಳಿಗೆ ಹೃದಯಸ್ಪರ್ಶಿ ಗೌರವ ಸಲ್ಲಿಸುವ ಈ ಮಹತ್ವದ ಕ್ಷಣಕ್ಕೆ ಜಿಲ್ಲೆಯ ಎಲ್ಲಾ ಸದಸ್ಯರು, ಹಿರಿಯ ಪತ್ರಕರ್ತರು ಹಾಗೂ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಲಾಗಿದೆ.

ಸನ್ಮಾನ ಸಮಾರಂಭದ ಬಳಿಕ ಸರ್ವ ಸದಸ್ಯರ ಮಹಾಸಭೆ ನಡೆಯಲಿದ್ದು, ಸಂಘದ ಭವಿಷ್ಯದ ಕಾರ್ಯಚಟುವಟಿಕೆಗಳ ಕುರಿತೂ ಮಹತ್ವದ ಚರ್ಚೆಗಳು ನಡೆಯಲಿವೆ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲಪ್ಪ ಸಂಕಿನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾದವಗಿರಿ ಗೂಡ್ಸ್ ಟರ್ಮಿನಲ್ ರಸ್ತೆ ಸಂಚಾರಕ್ಕೆ ಮುಕ್ತ

**ಮೈಸೂರು: ಮೇ.14:-** ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿ ಯಾದವಗಿರಿ ಗೂಡ್ಸ್ ಟರ್ಮಿನಲ್ ರಸ್ತೆಯನ್ನು ಲಾರಿಗೆಳಿಗೆ ಸಂಚಾರ ಮುಕ್ತ ಮಾಡಿಸುವಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಯಶಸ್ವಿಯಾಗಿದ್ದಾರೆ.



ಯಾದವಗಿರಿ ಬಳಿಯ ಗೂಡ್ಸ್ ಟರ್ಮಿನಲ್ ರಸ್ತೆಯನ್ನು ಬಂದ್ ಮಾಡಿದ್ದರಿಂದ ಲಾರಿಗಳು ಐದಾರು ಕಿಲೋ ಮೀಟರ್ ಬಳಸಿ ಬರಬೇಕಾಗಿತ್ತು. ಇದರಿಂದ ಲಾರಿ ಮಾಲೀಕರಿಗೆ ಸಾವಿರಾರು ರೂಪಾಯಿ ನಷ್ಟವಾಗುತ್ತಿತ್ತು. ಈ ಕುರಿತು ಲಾರಿ ಮಾಲೀಕರ ಸಂಘದ ಪದಾಧಿಕಾರಿಗಳು ಹತ್ತು ದಿನಗಳ ಹಿಂದೆ ಸಂಸದ ಯದುವೀರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ ಯದುವೀರ್ ಒಡೆಯರ್ ರೈಲ್ವೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ರೈಲ್ವೆ ಗೂಡ್ಸ್ ಟರ್ಮಿನಲ್ ರಸ್ತೆಯನ್ನು ಸಂಚಾರಕ್ಕೆ ಮುಕ್ತಗೊಳಿಸಿದರು.

ನಂತರ ಮಾತನಾಡಿದ ಸಂಸದ ಯದುವೀರ್ ಒಡೆಯರ್, ಈ ಸಮಸ್ಯೆ ಕುರಿತು ನನ್ನ ಗಮನಕ್ಕೆ ಬಂದ ಕೂಡಲೇ ರೈಲ್ವೆ ಅಧಿಕಾರಿಗಳೊಂದಿಗೆ ಚರ್ಚಿಸಿದೆ. ಇದಕ್ಕೆ ಪೂರಕವಾಗಿ ಸ್ಪಂದಿಸಿರುವ ಅಧಿಕಾರಿಗಳು ಬೈಪಾಸ್ ಮಾದರಿಯಲ್ಲಿರುವ ಟರ್ಮಿನಲ್ ರಸ್ತೆಯನ್ನು ಸಂಚಾರಕ್ಕೆ ಮುಕ್ತಗೊಳಿಸಿದರು ಎಂದರು.

ಈ ಟರ್ಮಿನಲ್ ದಾರಿ ಸಂಚಾರಕ್ಕೆ ಮುಕ್ತವಾಗಿದ್ದರಿಂದ ಪ್ರತಿಯೊಂದು ಲಾರಿಗೆ ತಿಂಗಳಿಗೆ 10 ಸಾವಿರ ರೂಪಾಯಿ ಉಳಿತಾಯವಾಗಲಿದೆ. ಇದು ಲಾರಿಗಳ ಮಾಲೀಕರಿಗೆ, ಚಾಲಕರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ಯದುವೀರ್ ಒಡೆಯರ್ ಸ್ಪಷ್ಟಪಡಿಸಿದರು.

ಗೂಡ್ಸ್ ಟರ್ಮಿನಲ್ ಸ್ಥಳಾಂತರವಿಲ್ಲ: ಯಾದವಗಿರಿ ಗೂಡ್ಸ್ ಟರ್ಮಿನಲ್ ಅನ್ನು ಸ್ಥಳಾಂತರ ಮಾಡಲಾಗುತ್ತದೆ ಎಂಬ ವದಂತಿ ಹರಡಿದೆ. ಆದರೆ ಇದು ಕಪೋಲಕಲ್ಪಿತ. ಈ ರೀತಿಯ ಯಾವುದೇ ಪ್ರಸ್ತಾವನೆ ರೈಲ್ವೆ ಇಲಾಖೆ ಮುಂದಿಲ್ಲ ಎಂದರು.

ಈ ಗೂಡ್ಸ್ ಟರ್ಮಿನಲ್ ಸ್ಥಳಾಂತರ ಸ್ಥಳಾಂತರವಾಗುವುದಿಲ್ಲ, ವಂದೇಭಾರತ್ ರೈಲ್ವೆ ನಿರ್ವಹಣೆಗೂ ಇದು ಬಳಕೆಯಾಗಲಿದೆ. ಇಂಥ ವದಂತಿಗಳನ್ನು ಯಾರೂ ಹಬ್ಬಿಸಬಾರದು. ಗೂಡ್ಸ್ ಟರ್ಮಿನಲ್ ಇಲ್ಲೇ ಇರಲಿದೆ ಎಂದು ಸಂಸದ ಯದುವೀರ್ ಒಡೆಯರ್ ಸ್ಪಷ್ಟಪಡಿಸಿದರು.

ಲಾರಿ ಮಾಲೀಕರ ಸಂಘದ ಅಧ್ಯಕ್ಷ ಶಾಹೀದ್, ಯಾದವಗಿರಿ ನಿವಾಸಿಗಳ ಸಂಘದ ಅಧ್ಯಕ್ಷ ಎಸ್ ಕೆ ದಿನೇಶ್, ಸಾಮಾಜಿಕ ಉದ್ಯಮಿ ನಿಖಿಲೇಶ್, ಜಿಲ್ಲಾ ಸಂಘದ ಅಧ್ಯಕ್ಷ ಕೋದಂಡರಾಮ್ ಮತ್ತು ಇತರರು ಉಪಸ್ಥಿತರಿದ್ದರು.

# ವಿದೇಶಗಳಿಗೆ ಸಕ್ಕರೆ ರಫ್ತು ಸಂಪೂರ್ಣ ನಿಷೇಧ

**ನವದೆಹಲಿ,ಮೇ 14-** ದೇಶೀಯ ಮಾರುಕಟ್ಟೆಯಲ್ಲಿ ಸಕ್ಕರೆ ಬೆಲೆ ಏರಿಕೆಯನ್ನು ನಿಯಂತ್ರಿಸುವ ಮತ್ತು ಸಮರ್ಪಕ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆಯಿಟ್ಟಿದೆ. ತಕ್ಷಣದಿಂದ ಜಾರಿಗೆ ಬರುವಂತೆ ಸಕ್ಕರೆ ರಫ್ತಿನ ಮೇಲೆ ಸರ್ಕಾರ ಸಂಪೂರ್ಣ ನಿಷೇಧ ಹೇರಿದೆ.



2026ರ ಸೆಪ್ಟೆಂಬರ್ 30ರವರೆಗೆ ಅಥವಾ ಮುಂದಿನ ಆದೇಶದವರೆಗೆ ಈ ನಿಷೇಧ ಜಾರಿಯಲ್ಲಿರಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಅಡಿ ಬರುವ ವಿದೇಶಿ ವ್ಯಾಪಾರ ಮಹಾನಿರ್ದೇಶನಾಲಯ (ಡಿಜಿಎಫ್‌ಟಿ) ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದೆ.

ಈ ಹಿಂದೆ ಸಕ್ಕರೆ ರಫ್ತು ನೀತಿಯನ್ನು ನಿರ್ಬಂಧಿತ ವರ್ಗದಲ್ಲಿ ಇರಿಸಲಾಗಿತ್ತು. ಆದರೆ, ಇದೀಗ ಬಿಡುಗಡೆಯಾಗಿರುವ ಹೊಸ ಅಧಿಸೂಚನೆಯಲ್ಲಿ ಸಕ್ಕರೆ ರಫ್ತು ನೀತಿಯನ್ನು ನಿಷೇಧಿತ ವರ್ಗಕ್ಕೆ ಬದಲಾಯಿಸಲಾಗಿದೆ. ಕಚ್ಚಾ ಸಕ್ಕರೆ, ಸಂಸ್ಕರಿಸಿದ ಸಕ್ಕರೆ ಮತ್ತು ಬಿಳಿ ಸಕ್ಕರೆ ಸೇರಿದಂತೆ ಎಲ್ಲಾ ರೀತಿಯ ಸಕ್ಕರೆಯ ರಫ್ತಿಗೆ ಈ ನಿಷೇಧ ಅನ್ವಯವಾಗುತ್ತದೆ ಎಂದು ಡಿಜಿಎಫ್‌ಟಿ ಸ್ಪಷ್ಟಪಡಿಸಿದೆ. ದೇಶದಲ್ಲಿ ಮುಂಬರುವ ದಿನಗಳಲ್ಲಿ ಹಬ್ಬದ ಸೀಸನ್ ಶುರುವಾಗಲಿದ್ದು, ಸಕ್ಕರೆಗೆ ಬೇಡಿಕೆ ಹೆಚ್ಚಾಗುವ ಸಾಧ್ಯತೆ ಇದೆ. ಬೆಲೆ ಏರಿಕೆಯ ಬಿಸಿ ಜನಸಾಮಾನ್ಯರಿಗೆ ತಟ್ಟಬಾರದು ಎಂಬ ಕಾರಣಕ್ಕೆ ಈ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದೆ.

ಸಕ್ಕರೆ ರಫ್ತಿನ ಮೇಲೆ ನಿಷೇಧ ಹೇರಿದ್ದರೂ, ಕೆಲವು ನಿರ್ದಿಷ್ಟ ಷರತ್ತುಗಳ ಅಡಿಯಲ್ಲಿ ವಿನಾಯಿತಿಗಳನ್ನು ನೀಡಲಾಗಿದೆ. ಸಿಎಕ್ಸ್‌ಎಲ್ ಮತ್ತು ಟಿಆರ್‌ಕ್ಯೂ ಕೋಟಾಗಳ ಅಡಿಯಲ್ಲಿ ಯುರೋಪಿಯನ್ ಒಕ್ಕೂಟ ಮತ್ತು ಅಮೆರಿಕ ದೇಶಗಳಿಗೆ ನಡೆಯುವ ಸಕ್ಕರೆ ರಫ್ತಿಗೆ ಈ ನಿಷೇಧ ಅನ್ವಯಿಸುವುದಿಲ್ಲ. ಈ ಕೋಟಾಗಳ ಅಡಿಯಲ್ಲಿ ನಿಗದಿಯಾಗಿರುವ ಪ್ರಮಾಣದ ಸಕ್ಕರೆಯನ್ನು ರಫ್ತು ಮಾಡಲು ಯಾವುದೇ ಅಡ್ಡಿಯಿಲ್ಲ ಎಂದು ಸರ್ಕಾರ ತಿಳಿಸಿದೆ. ಇದರ ಜೊತೆಗೆ, ಅಡ್ವಾನ್ಸ್ ಆಥರೈಸೇಶನ್ ಸ್ಕಿಮ್ ಅಡಿಯಲ್ಲಿ ನಡೆಯುವ ರಫ್ತುಗಳಿಗೂ ವಿನಾಯಿತಿ ನೀಡಲಾಗಿದೆ. ಇತರ ದೇಶಗಳ ಆಹಾರ ಭದ್ರತೆಯ ಅಗತ್ಯತೆಗಳನ್ನು ಪೂರೈಸಲು, ಸರ್ಕಾರದಿಂದ ಸರ್ಕಾರಕ್ಕೆ (ಎ2ಎ) ಮಾಡುವ ಸಾಗಣೆಗಳಿಗೂ ಈ ನಿಷೇಧದಿಂದ ವಿನಾಯಿತಿ ಇರಲಿದೆ. ಕಸ್ಟಮ್ಸ್ ಇಲಾಖೆಗೆ ಈಗಾಗಲೇ ಹಸ್ತಾಂತರಿಸಲಾದ ಮತ್ತು ರಫ್ತಿಗೆ ಸಿದ್ಧವಾಗಿರುವ ಭೌತಿಕ ಸಾಗಣೆಗಳಿಗೆ ಈ ಆದೇಶ ಅನ್ವಯಿಸುವುದಿಲ್ಲ. ಈ ಸಾಗಣೆಗಳು ಎಂದಿನಂತೆ ತಮ ಗಮ್ಯಸ್ಥಾನವನ್ನು ತಲುಪಲಿವೆ.

ಭಾರತವು ವಿಶ್ವದ ಅತಿದೊಡ್ಡ ಸಕ್ಕರೆ ಉತ್ಪಾದಕ ಮತ್ತು ಪ್ರಮುಖ ರಫ್ತುದಾರ ರಾಷ್ಟ್ರಗಳಲ್ಲಿ ಒಂದಾಗಿದೆ. ಈ ರಫ್ತು ನಿಷೇಧದಿಂದಾಗಿ ದೇಶೀಯ ಮಾರುಕಟ್ಟೆಯಲ್ಲಿ ಸಕ್ಕರೆಯ ಪೂರೈಕೆ ಹೆಚ್ಚಾಗಲಿದ್ದು, ಬೆಲೆಗಳಲ್ಲಿ ಸ್ಥಿರತೆ ಕಾಯ್ದುಕೊಳ್ಳಲು ಸಹಾಯವಾಗಲಿದೆ. ಅಂತರರಾಷ್ಟ್ರೀಯ ಒಪ್ಪಂದಗಳನ್ನು ಗೌರವಿಸುವ ಜೊತೆಗೆ ದೇಶೀಯ ಹಿತಾಸಕ್ತಿಗಳನ್ನು ಕಾಪಾಡುವಲ್ಲಿ ಡಿಜಿಎಫ್‌ಟಿ ಅಧಿಸೂಚನೆಯು ಸಮತೋಲನ ಕಾಯ್ದುಕೊಂಡಿದೆ. ದೇಶದ ಆಹಾರ ಭದ್ರತೆ ಮತ್ತು ಬೆಲೆ ನಿಯಂತ್ರಣಕ್ಕೆ ಸರ್ಕಾರವು ಹೆಚ್ಚಿನ ಆದ್ಯತೆ ನೀಡಿದೆ ಎಂಬುದನ್ನು ಈ ಕಟ್ಟುನಿಟ್ಟಿನ ನಿರ್ಧಾರವು ಸ್ಪಷ್ಟಪಡಿಸುತ್ತದೆ.

# ಎಸ್‌ಐಆರ್, ಇವಿಎಂ ವಿರುದ್ಧ ಉಪವಾಸ ಸತ್ಯಾಗ್ರಹಕ್ಕೆ ಬೆಂಬಲ




**ಔರಾದ್ :ಮೇ.14:**ಪಟ್ಟಣದ ತಹಸೀಲ್ ಕಚೇರಿ ಆವರಣದಲ್ಲಿ ಎಸ್‌ಐಆರ್ ಹಾಗೂ ಇವಿಎಂ ರದ್ದತಿಗೆ ಆಗ್ರಹಿಸಿ ಸಾಮಾಜಿಕ ಕಾರ್ಯಕರ್ತ ಗೋಪಾಲ್ ಸಿಂಗ್ ಠಾಕೂರ್ ನಡೆಸುತ್ತಿರುವ ಏಕಾಂಗಿ ಉಪವಾಸ ಸತ್ಯಾಗ್ರಹಕ್ಕೆ ಬೀದರ್ ಜಿಲ್ಲಾ ಎಸ್‌ಐಆರ್ ವಿರೋಧಿ ಜನಾಂದೋಲನ ಸಮಿತಿಯ ಸದಸ್ಯರು ಬುಧವಾರ ಭೇಟಿ ನೀಡಿ ಬೆಂಬಲ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಿತಿಯ ಪ್ರಮುಖರು, "ಪ್ರಜಾಪ್ರಭುತ್ವ ನಮ್ಮೆಲ್ಲರ ಜೀವ ಇದ್ದಂತೆ. ಅದು ಉಳಿದರೆ ನಾವೆಲ್ಲರೂ ಉಳಿಯುತ್ತೇವೆ. ಎಸ್‌ಐಆರ್ ಹೆಸರಿನಲ್ಲಿ ಮತದಾರರ ಹಕ್ಕು ಕಸಿದುಕೊಳ್ಳುವ ಸಂವಿಧಾನ ವಿರೋಧಿ ಪ್ರಕ್ರಿಯೆ ಖಂಡನೀಯವಾಗಿದೆ. ಗೋಪಾಲ್ ಸಿಂಗ್ ಠಾಕೂರ್ ಅವರು ನಡೆಸುತ್ತಿರುವ ಸತ್ಯಾಗ್ರಹಕ್ಕೆ ನಾವು ಸಂಪೂರ್ಣ ಬೆಂಬಲ ವ್ಯಕ್ತಪಡಿಸುತ್ತೇವೆ" ಎಂದು ಹೇಳಿದರು.

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡಲು ಪಾರದರ್ಶಕ ಚುನಾವಣಾ ವ್ಯವಸ್ಥೆ ಅಗತ್ಯವಾಗಿದ್ದು, ಎಸ್‌ಐಆರ್ ಹಾಗೂ ಇವಿಎಂ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಔರಾದ್‌ನಲ್ಲಿ ಶೀಘ್ರದಲ್ಲೇ ಸಮಾವೇಶ ಆಯೋಜಿಸಲಾಗುವುದು ಎಂದು ತಿಳಿಸಿದರು.

ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಗೋಪಾಲ್ ಸಿಂಗ್ ಠಾಕೂರ್ ಮಾತನಾಡಿ, "ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಎಂಬುದು ಮತದಾರರ ಹಕ್ಕು ಕಸಿದುಕೊಳ್ಳುವ ತಂತ್ರವಾಗಿ ಪರಿಣಮಿಸಿದ್ದು, ಇದರ ಪರಿಣಾಮವಾಗಿ ಲಕ್ಷಾಂತರ ಜನರು ತಮ್ಮ ಅಮೂಲ್ಯ ಮತದಾನ ಹಕ್ಕನ್ನು ಕಳೆದುಕೊಂಡಿದ್ದಾರೆ" ಎಂದು ಆರೋಪಿಸಿದರು.

"ಪ್ರಜಾಪ್ರಭುತ್ವದ ಮೂಲ ಆಧಾರವಾದ ಮತದಾನದ ಹಕ್ಕಿಗೆ ಧಕ್ಕೆಯುಂಟು ಮಾಡುವ ಎಸ್‌ಐಆರ್ ಹಾಗೂ ಇವಿಎಂ ವ್ಯವಸ್ಥೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಿ ಪ್ರಜಾತಂತ್ರದ ಮೌಲ್ಯಗಳನ್ನು ಉಳಿಸಬೇಕು ಎಂಬ ಉದ್ದೇಶದಿಂದ ನಾನು ಈ ಹೋರಾಟ ನಡೆಸುತ್ತಿದ್ದೇನೆ. ನನ್ನ ಉಪವಾಸ ಸತ್ಯಾಗ್ರಹ ಇಂದು 11ನೇ ದಿನ ಪೂರೈಸಿದ್ದು, ಮುಂದಿನ 21 ದಿನಗಳವರೆಗೆ ನಿರಂತರವಾಗಿ ಮುಂದುವರಿಯಲಿದೆ" ಎಂದು ಹೇಳಿದರು.

ಈ ವೇಳೆ ಎಸ್‌ಐಆರ್ ವಿರೋಧಿ ಜನಾಂದೋಲನ ಸಮಿತಿಯ ಪ್ರಮುಖರಾದ ಅಬ್ದುಲ್ ಮನ್ನಾನ್ ಸೇಠ್, ಓಂಪ್ರಕಾಶ್ ರೊಟ್ಟೆ, ನಿಜಾಮೊದ್ದೀನ್, ಡಾ. ಮಕ್ಸೂದ್ ಚಂದಾ, ಬಂಟಿ ದರ್ಬಾರೆ, ರಾಹುಲ್ ಖಂದಾರೆ, ಡಾ. ಫಯಾಜ್, ಸಂತೋಷ್ ಸೂರ್ಯವಂಶಿ, ಸಂತೋಷ ಸಿಂಧೆ, ದಿನೇಶ್, ಅಮೀರೋದ್ದೀನ್ ಸೇರಿದಂತೆ ಅನೇಕರು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಸತ್ಯಾಗ್ರಹಕ್ಕೆ ಐಕ್ಯತೆ ಸೂಚಿಸಿದರು.

# "ಬಂಗಾಳದಲ್ಲಿ ಮಮತಾ ಮಾದರಿಯಲ್ಲೇ ಸಿದ್ದರಾಮಯ್ಯನವರಿಗೂ ಕರ್ನಾಟಕದ ಜನ ಪಾಠ ಕಲಿಸುತ್ತಾರೆ"

**ಬೆಂಗಳೂರು,ಮೇ 14-** ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿಗೆ ಅಲ್ಲಿನ ಮತದಾರರು ಯಾವ ರೀತಿ ಪಾಠ ಕಲಿಸಿದರೋ ಅದೇ ರೀತಿ ಕರ್ನಾಟಕದಲ್ಲಿ ಇಂದಿನ ಸಿಎಂ ಸಿದ್ದರಾಮಯ್ಯನವರಿಗೂ ಸರಿಯಾದ ಪಾಠ ಕಲಿಸಲಿದ್ದಾರೆ ಎಂದು ಉಡುಪಿ ಶಾಸಕ ಯಶಪಾಲ್ ಸುವರ್ಣ ಎಚ್ಚರಿಸಿದ್ದಾರೆ.



ಹಿಜಾಬ್ ಬೇಕು ಎಂದು ಯಾವ ವಿದ್ಯಾರ್ಥಿಗಳೂ ಸರ್ಕಾರವನ್ನು ಕೇಳಿರಲಿಲ್ಲ. ಸರ್ಕಾರ ಒಂದು ಸಮುದಾಯವನ್ನು ಓಲೈಸಿಕೊಳ್ಳಲು ಜೇನುಗೂಡಿಗೆ ಕೈ ಹಾಕಿದೆ. ಮಮತಾ ಬ್ಯಾನರ್ಜಿ ಕೂಡಾ ಇದೇ ತಂತ್ರವನ್ನು ಅನುಸರಿಸಿದ್ದರು. ಟಿಎಂಸಿ ಕಥೆ ಏನಾಯಿತೋ ಸಿದ್ದರಾಮಯ್ಯನವರ ಕಥೆಯೂ ಅದೇ ಆಗುತ್ತದೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯಸರ್ಕಾರ ಹೊರಡಿಸಿರುವ ವಿವಾದಾತಕ ಆದೇಶವನ್ನು ತಕ್ಷಣವೇ ಹಿಂಪಡೆಯಬೇಕು. ಇಲ್ಲದಿದ್ದರೆ ಮುಂದಿನ ಚುನಾವಣೆಯಲ್ಲಿ ಸಿದ್ದರಾಮಯ್ಯನವರೇ ಸೋಲು ಅನುಭವಿಸುತ್ತಾರೆ. ಇದಕ್ಕೆ ಕಾಂಗ್ರೆಸ್ ಅವಕಾಶ ಮಾಡಿಕೊಡಬಾರದು ಎಂದು ಮನವಿ ಮಾಡಿದರು.

ಸರ್ಕಾರ ಅಲ್ಪಸಂಖ್ಯಾತರ ತುಷ್ಟಿಕರಣ ಮಾಡುತ್ತಿದೆ. ಶಿಕ್ಷಣ ವ್ಯವಸ್ಥೆಯನ್ನು ಇಸ್ಲಾಮೀಕರಣ ಮಾಡಲು ಹೊರಟಿದೆ. ಸರ್ಕಾರ ತನ್ನ ಆದೇಶ ವಾಪಸ್ ಪಡೆಯಬೇಕು. ಹಿಜಾಬ್ ಶಾಲೆಗಳಲ್ಲಿ ಗೊಂದಲಕ್ಕೆ ಕಾರಣ ಆಗಲಿದೆ. ಸರ್ಕಾರ ಆದೇಶ ವಾಪಸ್ ಪಡೆಯದಿದ್ದರೆ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು.

ಇದರಿಂದಾಗಿ ವಿದ್ಯಾರ್ಥಿಗಳು ಧೃತಿಗೆಡಬಾರದು. ಶಾಲಾ ವಾತಾವರಣ ಹಾಳು ಮಾಡಲು ನಾವು ಬಿಡುವುದಿಲ್ಲ. ನಮ ಕ್ಷೇತ್ರ ವ್ಯಾಪ್ತಿಯ ಕಾಲೇಜಿನಲ್ಲಿ ನಾಲ್ಕು ವರ್ಷಗಳ ಹಿಂದೆ ಆರು ವಿದ್ಯಾರ್ಥಿನಿಯರು ಹಿಜಾಬ್ ಧರಿಸಿ ಬಂದಿದ್ದರು. ಅವರ ಹಿಂದೆ ಪಿಎಫ್‌ಐ ಚಿತಾವಣೆ ಇತ್ತು. ನಂತರ ನಮ ಸರ್ಕಾರ ಹಿಜಾಬ್ ನಿಷೇಧಿಸಿತ್ತು ಎಂದು ಹೇಳಿದರು.

ಹಿಜಾಬ್ ಬೇಕು ಎಂದು ಯಾರು ಕೇಳದಿದ್ದರೂ ಸರ್ಕಾರ ಆದೇಶ ಮಾಡಿದೆ. ಇದನ್ನು ಕೂಡಲೇ ಸರ್ಕಾರ ಆದೇಶ ವಾಪಸ್ ಪಡೆಯಬೇಕು. ವಿನಾಕಾರಣ ಇಂತಹ ಹೇರಿಕೆ ತಂದೊಡ್ಡುವ ಕೆಲಸ ಸರ್ಕಾರ ಮಾಡಿದೆ. ವಿದ್ಯಾರ್ಥಿಗಳಲ್ಲಿ ಮತೀಯ ಭಾವನೆ ಮೂಡಿಸಲು ಹೊರಟಿದೆ ಎಂದು ಆರೋಪಿಸಿದರು.

ಅದಕ್ಕೆ ತುಷ್ಟಿಕರಣವನ್ನು ಎತ್ತಿ ಹಿಡಿಯಲು ತೀರ್ಮಾನ ಮಾಡಿದೆ. ಯಾವುದೇ ಅಲ್ಪಸಂಖ್ಯಾತರು ಇವರನ್ನು ಕೇಳಿರಲಿಲ್ಲ. ಕಾಂಗ್ರೆಸ್ ಅಂತರಿಕ ಘರ್ಷಣೆಯನ್ನು ಮುಚ್ಚಿ ಹಾಕಲು ಆದೇಶ ವಾಪಸ್ ಪಡೆದಿದ್ದಾರೆ. ಸರ್ಕಾರದ ಆದೇಶವನ್ನು ಬಿಜೆಪಿ ಸ್ಪಷ್ಟವಾಗಿ ವಿರೋಧಿಸುತ್ತದೆ ಎಂದು ಗುಡುಗಿದರು.

ಇದಕ್ಕೆ ಹೋರಾಟದ ರೂಪು ರೇಷೆ ಆಗಿಯೇ ಆಗುತ್ತದೆ. ಮತ್ತೆ ಒಡೆದಾಳುವ ನೀತಿಯನ್ನು ಕಾಂಗ್ರೆಸ್ ವಹಿಸಿಕೊಂಡಿದೆ. ಮುಂದಾಗುವ ಎಲ್ಲಾ ವಿಚಾರಗಳಿಗೆ ಕಾಂಗ್ರೆಸ್ ಹೊಣೆ ಆಗಬೇಕಾಗುತ್ತದೆ ಎಂದು ಎಚ್ಚರಿಕೆ ಕೊಟ್ಟರು.

ಶಾಸಕ ಮಹೇಶ್ ಟೆಂಗಿನಕಾಯಿ ಮಾತನಾಡಿ, ಕಾಂಗ್ರೆಸ್ ತನ್ನ ಆಂತರಿಕ ಕಚ್ಚಾಟ ಮುಚ್ಚಲು ಬೇರೆ ಬೇರೆ ವಿಚಾರ ಮುನ್ನೆಲೆಗೆ ತರುತ್ತಿದೆ. ಬಿಜೆಪಿ ಅವಧಿಯಲ್ಲಿ ಹಿಜಾಬ್ ನಿಷೇಧ ಮಾಡಲಾಗಿತ್ತು. ನಮ್ಮ ಸರ್ಕಾರದ ಆದೇಶವನ್ನ ಹೈಕೋರ್ಟ್ ಸಹ ಎತ್ತಿ ಹಿಡಿದಿತ್ತು. ಈಗ ಸರ್ಕಾರ ದಾವಣಗೆರೆಯಲ್ಲಾದ ಅನುಭವದಿಂದ ಅಳುಕಿದೆ. ಮತ್ತೆ ಹಿಜಾಬ್ ತಂದು ತಾರತಮ್ಯ ಮಾಡುತ್ತಿದೆ, ಅಲ್ಪಸಂಖ್ಯಾತರ ತುಷ್ಟಿಕರಣಕ್ಕೆ ಮುಂದಾಗಿದೆ ಎಂದು ವಾಗ್ದಾಳಿ ಮಾಡಿದರು. ಶೈಕ್ಷಣಿಕ ಕೇಂದ್ರಗಳಲ್ಲಿ ಸಮಾನತೆ ಮತ್ತು ಶಾಲಾ ಮಕ್ಕಳಲ್ಲಿ ಏಕತೆಯನ್ನು ತರುವ ಉದ್ದೇಶದಿಂದ ಹಿಂದಿನ ಬಿಜಪಿ ಸರ್ಕಾರ ಜಾರಿಗೆ ತಂದಿದ್ದ ಶಿಸ್ತುಬದ್ಧ ಸಮವಸ್ತ್ರ ನಿಯಮವನ್ನು ಹಿಂಪಡೆದಿರುವುದು ಖಂಡನೀಯ ಎಂದು ಆಕ್ಷೇಪಿಸಿದರು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**